ಸಂಪುಟ : 11 ಸಂಚಿಕೆ: 67 ಪುಟ : 4+2 ಬೆಲೆ: 3.00 ರವಿವಾರ ಎಪ್ರಿಲ್ 12 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 67 Pages : 4+2 Price : 3.00 Sunday April 12 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಪ್ರಚೋದನಕಾರಿ ಹೇಳಿಕೆ ಖಂಡನೆ – ಬಂಧನಕ್ಕೆ ಒತ್ತಾಯ

## ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಬಿಜೆಪಿ ಕಾರ್ಯಕರ್ತರಿಂದ ದೂರು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಅಸ್ಸಾಂ ಚುನಾವಣಾ ಪ್ರಚಾರದ ಭಾಷಣದ ವೇಳೆ ನೀಡಿದ ಹೇಳಿಕೆಯನ್ನು ಖಂಡಿಸಿ ಬಿಜೆಪಿ ಶಿರಹಟ್ಟಿ ಮಂಡಳ ಯುವ ಮೋರ್ಚಾ ವತಿಯಿಂದ ಶನಿವಾರ ಲಕ್ಷ್ಮೇಶ್ವರ ಪೊಲೀಸ್ ಠಾಣೆಯ ಸಿಪಿಐ ಬಿ.ವಿ. ನ್ಯಾಮಗೌಡ ಹಾಗೂ ಪಿಎಸ್ಐ ನಾಗರಾಜ ಗಡದ ಅವರಿಗೆ ಮನವಿ ಸಲ್ಲಿಸಲಾಯಿತು.

ಮನವಿ ಪತ್ರದಲ್ಲಿ ಜವಾಬ್ದಾರಿಯುತ ಸ್ಥಾನದಲ್ಲಿ ಇರುವ ಅವರು ಮತದಾನದ ಆಸೆಗಾಗಿ ಅಲ್ಪಸಂಖ್ಯಾತರ ಓಲೈಕೆ ಮಾಡುವವರು. ಬೇಜವಾಬ್ದಾರಿಯಿಂದ ಪ್ರಚೋದನಕಾರಿ ಹೇಳಿಕೆ ನೀಡಿರುವುದು ದೇಶದಲ್ಲಿರುವ ಲಕ್ಷಾಂತರ ಬಿಜೆಪಿ ಮತ್ತು ಆರ್‌ಎಸ್‌ಎಸ್ ಸದಸ್ಯರ ಜೀವಕ್ಕೆ ಅಪಾಯವೊಡ್ಡಿದೆ ಎಂದು ಆರೋಪಿಸಲಾಗಿದೆ.

ಖರ್ಗೆಯವರು ಅಸ್ಸಾಂನಲ್ಲಿ ಮಾಡಿದ ಪ್ರಚೋದನಕಾರಿ ಭಾಷಣ ದೇಶಾದ್ಯಂತ ಇರುವ ಸಂಘ ಪರಿವಾರದ ಮೇಲೆ ಮಾಡಿದ ದಾಳಿಯಾಗಿದೆ. ಇದರ ಪರಿಣಾಮ ದೇಶವ್ಯಾಪಿ ಬೀರುವ ಸಂಭವವನ್ನು ತಳ್ಳಿಹಾಕಲಾಗದು. ಇವರ ಹೇಳಿಕೆಯು ಮತಿಗೇಡಿಗಳಿಗೆ ಉತ್ತೇಜನ ನೀಡಿ ನಮ್ಮ ಕಾರ್ಯಕರ್ತರ ಮೇಲೆ ದಾಳಿ ಸಂಭವಿಸಬಹುದಾಗಿದೆ ಎಂದು ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಪೊಲೀಸರು ಯಾವುದೇ ಔಪಚಾರಿಕ ದೂರುಗಳಿಗಾಗಿ ಕಾಯದೆ ಇಂತಹ ಪ್ರಕರಣಗಳಲ್ಲಿ ತಾವಾಗಿಯೇ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿರುವುದನ್ನು ತಮ್ಮ ಗಮನಕ್ಕೆ ತರಲು ಕಾರ್ಯಕರ್ತರು ಮನವಿ ಮಾಡಿದ್ದಾರೆ. ಖರ್ಗೆಯವರು ಇಸ್ಲಾಂ ಪವಿತ್ರ ಗ್ರಂಥ ಕುರಾನ್ ಉಲ್ಲೇಖಿಸಿ ಹತ್ಯೆ ನ್ಯಾಯ ಎಂದಿರುವುದು ಸಮುದಾಯದ ಮೂಲಭೂತವಾದಿಗಳಿಗೆ ಉತ್ತೇಜನ ನೀಡುತ್ತದೆ ಎಂಬ ಆತಂಕವನ್ನೂ ವ್ಯಕ್ತಪಡಿಸಿದ್ದಾರೆ.

ಸೂಕ್ಷ್ಮ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಬಿಜೆಪಿ ಕಾರ್ಯಕರ್ತರನ್ನು ರಕ್ಷಿಸಲು ಭದ್ರತಾ ವ್ಯವಸ್ಥೆ ಮಾಡಬೇಕು ಹಾಗೂ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರನ್ನು ಕೂಡಲೇ ಬಂಧಿಸಬೇಕು ಎಂದು ಒತ್ತಾಯಿಸಿದ್ದಾರೆ.

ಅದೇ ರೀತಿ ಖರ್ಗೆಯವರ ಪುತ್ರ ಪ್ರಿಯಾಂಕ ಖರ್ಗೆ ಅವರೂ ಸಹ ಪದೇ ಪದೇ ಆರ್‌ಎಸ್‌ಎಸ್ ವಿರುದ್ಧ ನೀಡುತ್ತಿರುವ ಹೇಳಿಕೆಗಳನ್ನು ಖಂಡನೀಯವೆಂದು ಕಾರ್ಯಕರ್ತರು ತಿಳಿಸಿದ್ದಾರೆ.

ಈ ವೇಳೆ ಬಿಜೆಪಿ ಶಿರಹಟ್ಟಿ ಮಂಡಳ ಯುವ ಮೋರ್ಚಾ ಅಧ್ಯಕ್ಷ ಬಸವರಾಜ ಚಕ್ರಸಾಲಿ, ಜಿಲ್ಲಾ ಪ್ರ. ಕಾರ್ಯದರ್ಶಿ ಶಕ್ತಿ ಕತ್ತಿ, ಜಿಲ್ಲಾ ಯುವ ಮೋರ್ಚಾ ಉಪಾಧ್ಯಕ್ಷ ಭೀಮಣ್ಣ ಯಂಗಾಡಿ, ನಗರ ಯುವ ಮೋರ್ಚಾ ಅಧ್ಯಕ್ಷ ಈರಣ್ಣ ಪೂಜಾರ, ಥಾವರಪ್ಪ ಲಮಾಣಿ, ಚಂದ್ರು ಲಮಾಣಿ, ಆಕಾಶ್ ಸೌದತ್ತಿ, ನವೀನ ಕುಂಬಾರ, ಹನುಮಂತ ಜಾಲಿಮರದ, ಲಕ್ಷ್ಮಣ ಹಳ್ಳಿಕೇರಿ ಸೇರಿದಂತೆ ಅನೇಕ ಕಾರ್ಯಕರ್ತರು ಉಪಸ್ಥಿತರಿದ್ದರು.

### 18 ದಿನಗಳ ಹೊನಲು ಬೆಳಕಿನ ಕ್ರೀಡಾಹಬ್ಬಕ್ಕೆ ಚಾಲನೆ – 20 ತಂಡಗಳ ಭರ್ಜರಿ ಪೈಪೋಟಿ

## ಇಂದಿನಿಂದ 'ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್' ಸೀಸನ್–2 ಆರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಕ್ರೀಡಾ ಇತಿಹಾಸದಲ್ಲಿ ಹೊಸ ಮೈಲಿಗಲ್ಲು ನಿರ್ಮಿಸಿದ 'ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್' ಮೊದಲ ಸೀಸನ್‌ನ ಅಭೂತಪೂರ್ವ ಯಶಸ್ಸಿನ ನಂತರ ಇದೀಗ ಸೀಸನ್–2 ಭರ್ಜರಿಯಾಗಿ ಆರಂಭಗೊಳ್ಳುತ್ತಿದೆ.

ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ಎಪ್ರಿಲ್ 12ರಿಂದ ಹೊನಲು ಬೆಳಕಿನ ಕ್ರಿಕೆಟ್ ಪಂದ್ಯಾವಳಿ ಆರಂಭವಾಗಲಿದ್ದು, ಕಾಂಗ್ರೆಸ್ ಯುವ ಘಟಕದ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಈ ಮಾಹಿತಿ ನೀಡಿದರು.

ನಗರದ ಕಾಟನ್ ಸೇಲ್ ಸೊಸೈಟಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉದ್ಘಾಟನಾ ಕಾರ್ಯಕ್ರಮಕ್ಕೆ ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ ಪಾಟೀಲ, ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ ಸೇರಿದಂತೆ ಹಲವರು ಆಗಮಿಸಲಿದ್ದಾರೆ ಎಂದರು.



ವಿಶೇಷವಾಗಿ ಅಂತಾರಾಷ್ಟ್ರೀಯ ಮಾಜಿ ಕ್ರಿಕೆಟಿಗರಾದ ಸುನಿಲ್ ಜೋಶಿ, ಸುಜಿತ್ ಸೋಮಶೇಖರ್ ಹಾಗೂ ಈರಣ್ಣ ಸವಡಿ ಭಾಗವಹಿಸಲಿದ್ದಾರೆ.

**20 ತಂಡಗಳ ಪೈಪೋಟಿ :** ಸೀಸನ್–1ರಲ್ಲಿ 14 ತಂಡಗಳು ಭಾಗವಹಿಸಿದ್ದರೆ, ಈ ಬಾರಿ 456 ಕ್ರೀಡಾಪಟುಗಳ ನೋಂದಣಿಯಿಂದ ತಂಡಗಳ ಸಂಖ್ಯೆಯನ್ನು 20ಕ್ಕೆ ಏರಿಸಲಾಗಿದೆ. ಹರಾಜು ಪ್ರಕ್ರಿಯೆಯಲ್ಲಿ 20 ಫ್ರಾಂಚೈಸಿಗಳು ಭಾಗವಹಿಸಿ 320 ಆಟಗಾರರನ್ನು ಆಯ್ಕೆ ಮಾಡಿಕೊಂಡಿವೆ.

ಈ ಬಾರಿ ಗದಗ ನಗರದ 220 ಆಟಗಾರರ ಜೊತೆಗೆ 100 ಗ್ರಾಮೀಣ ಕ್ರೀಡಾಪಟುಗಳಿಗೆ ಅವಕಾಶ ಕಲ್ಪಿಸಲಾಗಿದೆ. ಪ್ರತಿ ತಂಡದಲ್ಲಿ 16 ಆಟಗಾರರಿದ್ದು, ಕನಿಷ್ಠ 5 ಮಂದಿ ಗ್ರಾಮೀಣ ಭಾಗದವರೇ ಇರಬೇಕು ಎಂಬ ನಿಯಮದ ಮೂಲಕ ಗ್ರಾಮೀಣ ಪ್ರತಿಭೆಗಳಿಗೆ ಉತ್ತೇಜನ ನೀಡಲಾಗಿದೆ.

**ಗರಿಷ್ಠ ಬೆಲೆಗೆ ಆಟಗಾರರು:** ಮಾರ್ಚ್ 22 ಮತ್ತು 23ರಂದು ನಡೆದ ಹರಾಜಿನಲ್ಲಿ ಆಟಗಾರರು ಭಾರಿ ಮೊತ್ತಕ್ಕೆ ಮಾರಾಟವಾಗಿದ್ದಾರೆ. ಎಡ್ವರ್ಡ್ 44 ಸಾವಿರ ರೂ., ಶಂಕರ 42 ಸಾವಿರ ರೂ., ಯುವರಾಜ್ 36 ಸಾವಿರ ರೂ., ವೈಭವ್ ಮತ್ತು ಫಯಾಜ್ ತಲಾ 34 ಸಾವಿರ ರೂ.ಗೆ ಬಿಡ್ ಆಗಿದ್ದಾರೆ.

**ಆಕರ್ಷಕ ಬಹುಮಾನಗಳು:** ಪ್ರಥಮ ಬಹುಮಾನ 2 ಲಕ್ಷ ರೂ., ದ್ವಿತೀಯ 1.5 ಲಕ್ಷ ರೂ. ಘೋಷಿಸಲಾಗಿದೆ. ಜೊತೆಗೆ ಟೂರ್ನಿಯ ಶ್ರೇಷ್ಠ ಆಟಗಾರನಿಗೆ 25 ಸಾವಿರ ರೂ., ಅತ್ಯುತ್ತಮ ಬ್ಯಾಟ್ಸಮನ್ ಮತ್ತು ಬಾಲರ್‌ಗೆ ತಲಾ 10 ಸಾವಿರ ರೂ. ಸೇರಿದಂತೆ ಅನೇಕ ವೈಯಕ್ತಿಕ ಬಹುಮಾನಗಳನ್ನು ನೀಡಲಾಗುತ್ತದೆ.

**18 ದಿನಗಳ ಟೂರ್ನಿ ವೈಶಿಷ್ಟ್ಯಗಳು:** ಒಟ್ಟು 18 ದಿನಗಳ ಕಾಲ ನಡೆಯುವ ಈ ಟೂರ್ನಿಯಲ್ಲಿ ಅತ್ಯುತ್ತಮ ಬೆಳಕು ವ್ಯವಸ್ಥೆ, ಸಾಮಾಜಿಕ ಜಾಲತಾಣಗಳಲ್ಲಿ ನೇರ ಪ್ರಸಾರ ಹಾಗೂ ಥರ್ಡ್ ಅಂಪೈರ್ ವ್ಯವಸ್ಥೆ ಸಹ ಇರಲಿದೆ.

ಸುದ್ದಿಗೋಷ್ಠಿಯಲ್ಲಿ ಸಿದ್ಧಲಿಂಗೇಶ್ವರ ಪಾಟೀಲ, ಅಶೋಕ ಮಂದಾಲಿ, ಉಮರಫಾರೂಕ್ ಹುಬ್ಬಳ್ಳಿ, ಸರ್ಫರಾಜ್ ಶೇಖ್, ಅಹ್ಮದ ಖಾಜಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಎ.14ರಂದು ಅಂಬೇಡ್ಕರ್– ಬಾಬು ಜಗಜೀವನ ರಾಮ್ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 14, 2026 ರಂದು ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಹಾಗೂ ಡಾ. ಬಾಬು ಜಗಜೀವನ ರಾಮ್ ಅವರ 119ನೇ ಜನ್ಮ ದಿನಾಚರಣೆ ಅಂಗವಾಗಿ ಗದಗದಲ್ಲಿ ವಿವಿಧ ಕಾರ್ಯಕ್ರಮಗಳು ನಡೆಯಲಿವೆ.

ಈ ಪ್ರಯುಕ್ತ ಮುಂಜಾನೆ 9 ಗಂಟೆಗೆ ಗದಗ–ಬೆಟಗೇರಿ ನಗರಸಭೆ ಆವರಣದಿಂದ ಭವ್ಯ ಮೆರವಣಿಗೆ ಪ್ರಾರಂಭವಾಗಲಿದೆ. ಮೆರವಣಿಗೆಯು ಗಾಂಧಿ ಸರ್ಕಲ್, ಮಹೇಂದ್ರಕರ ಸರ್ಕಲ್, ಟಾಂಗಾ ಕೂಟ್, ಬಸವೇಶ್ವರ ಸರ್ಕಲ್, ಜೋಡುಮಾರುತಿ ದೇವಸ್ಥಾನ, ಪ್ರವಾಸಿ ಮಂದಿರ ಹಾಗೂ ಮುಳಗುಂದ ನಾಕಾ

▸▸ 4ನೇ ಪುಟಕ್ಕೆ

## ಇಂದು ಅಂಬೇಡ್ಕರ್‌ರ ಚಿಂತನೆ ಕುರಿತು ಉಪನ್ಯಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಿ. ಆರ್. ಅಂಬೇಡ್ಕರ್ ಅವರ ಚಿಂತನೆ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಬಸವದಳ ವತಿಯಿಂದ ಆಯೋಜಿಸಲಾಗಿದೆ.

ನಗರದ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಎಪ್ರಿಲ್ 12, 2026 ರಂದು ಭಾನುವಾರ ಬೆಳಿಗ್ಗೆ 10 ಗಂಟೆಗೆ ನಡೆಯಲಿರುವ ಬಸವದಳದ 1693ನೇ ಶರಣ ಸಂಗಮದಲ್ಲಿ ಈ ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವದಳದ ಕಾರ್ಯಾಧ್ಯಕ್ಷ ಶರಣ ಎಂ. ಬಿ. ಲಿಂಗದಾಳ ವಹಿಸಲಿದ್ದು, ಶರಣತತ್ವ ಚಿಂತಕರಾದ ಶರಣ ಆರ್. ಎಲ್. ಕಳ್ಳಿಮನಿ ಉಪನ್ಯಾಸ ನೀಡಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಂಘಟಕರ ಪರವಾಗಿ ಎಸ್. ಎ. ಮುಗದ ಅವರು ವಿನಂತಿಸಿದ್ದಾರೆ.




## ಲಕ್ಕುಂಡಿ ಕಾಲೇಜಿಗೆ 70.21% ಫಲಿತಾಂಶ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿನ ಜನತಾ ವಿದ್ಯಾವರ್ಧಕ ಸಂಸ್ಥೆಯ ಬಿ.ಎಚ್. ಪಾಟೀಲ ಸಂಯುಕ್ತ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ಫಲಿತಾಂಶ ಶೇ. 70.21 ರಷ್ಟಾಗಿದೆ. ಪರೀಕ್ಷೆಗೆ ಹಾಜರಾದ 47 ವಿದ್ಯಾರ್ಥಿಗಳಲ್ಲಿ 33 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಇದರಲ್ಲಿ 7 ವಿದ್ಯಾರ್ಥಿಗಳು ಉನ್ನತ ದರ್ಜೆ, 21 ವಿದ್ಯಾರ್ಥಿಗಳು ಪ್ರಥಮ ದರ್ಜೆ, 3 ವಿದ್ಯಾರ್ಥಿಗಳು ದ್ವಿತೀಯ ದರ್ಜೆ ಹಾಗೂ 2 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ಪಾಸಾಗಿದ್ದಾರೆ.

ವಿದ್ಯಾರ್ಥಿ ಅಂಬರೇಶ ಶಿವಪ್ಪ ಅವರು 551 ಅಂಕಗಳು (91.83%) ಪಡೆದು ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಆಕಾಶ ಶೇಖಪ್ಪ 543 ಅಂಕಗಳು (90.50%) ಗಳಿಸಿ ದ್ವಿತೀಯ ಸ್ಥಾನ ಪಡೆದಿದ್ದು, ಚಂದ್ರಶೇಖರ ಬಸಪ್ಪ 542 ಅಂಕಗಳು (90.33%) ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ.

ಕಾಲೇಜಿಗೆ ಕೀರ್ತಿ ತಂದ ವಿದ್ಯಾರ್ಥಿಗಳನ್ನು ಸಂಸ್ಥೆಯ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿ, ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯರು ಹಾಗೂ ಸಿಬ್ಬಂದಿ ವರ್ಗ ಅಭಿನಂದಿಸಿದ್ದಾರೆ.

# ಜನಪರ ರಾಜಕಾರಣದ ನೈತಿಕ ಧ್ವನಿ-ಬಸವರಾಜ ಹೊರಟ್ಟಿ

### ಜನ್ಮದಿನದ ಸವಿನೆನಪಿನಲ್ಲಿ ಅಪರೂಪದ ನಾಯಕನ ವ್ಯಕ್ತಿತ್ವಕ್ಕೆ ನಮನ

ಎಪ್ರಿಲ್ 14 ಜನ್ಮದಿನದ ಸವಿನೆನಪಿನಲ್ಲಿ ರಾಜ್ಯ ರಾಜಕಾರಣದಲ್ಲಿ ನೈತಿಕತೆ, ಪ್ರಾಮಾಣಿಕತೆ ಮತ್ತು ಜನಪರತೆಗಾಗಿ ಗುರುತಿಸಿಕೊಂಡಿರುವ ಬಸವರಾಜ ಹೊರಟ್ಟಿಯವರ ವ್ಯಕ್ತಿತ್ವವನ್ನು ಸ್ಮರಿಸುವುದು ಪ್ರಸ್ತುತ ಸಂದರ್ಭದಲ್ಲಿ ವಿಶೇಷ ಅರ್ಥ ಹೊಂದಿದೆ.

ಐದು ದಶಕಗಳಿಗೂ ಹೆಚ್ಚು ಕಾಲ ಸಾರ್ವಜನಿಕ ಬದುಕಿನಲ್ಲಿ ದಣಿವರಿಯದೇ ಜನಪರ ಕಾರ್ಯ ನಿರ್ವಹಿಸಿದ ಹೊರಟ್ಟಿಯವರು, ಯಾವುದೇ ಕಳಂಕವಿಲ್ಲದೇ ತಮ್ಮದೇ ಆದ ವಿಶಿಷ್ಟ ಹೆಜ್ಜೆಗುರುತುಗಳನ್ನು ಮೂಡಿಸಿದ್ದಾರೆ. ಇಂದಿನ ಕಲುಷಿತ ರಾಜಕೀಯ ಪರಿಸ್ಥಿತಿಯಲ್ಲಿ ಅವರು ನೈತಿಕ ಶಕ್ತಿಯ ಪ್ರತೀಕವಾಗಿ ಕಾಣಿಸಿಕೊಂಡಿದ್ದಾರೆ. ಶಿಕ್ಷಕ ವಲಯದಲ್ಲಿ ವಿಶ್ವಾಸಾರ್ಹ ನಾಯಕನಾಗಿ ಹೊರಟ್ಟಿಯವರು ಅಪಾರ ಗೌರವಕ್ಕೆ ಪಾತ್ರರಾಗಿದ್ದಾರೆ.

ಯಾವುದೇ ರಾಜಕೀಯ ಹಿನ್ನೆಲೆ ಇಲ್ಲದ ಕುಟುಂಬದಿಂದ ಬಂದ ಹೊರಟ್ಟಿಯವರು, ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲೂಕಿನ ಯಡಹಳ್ಳಿ ಗ್ರಾಮದಿಂದ ಹುಬ್ಬಳ್ಳಿಗೆ ಬಂದು ತಮ್ಮ ಪರಿಶ್ರಮದಿಂದಲೇ ಎತ್ತರಕ್ಕೆ ಏರಿದವರು. ಅವರು ಬರೆಯುವಂತೆ ಬದುಕಿದ ಅಪರೂಪದ ವ್ಯಕ್ತಿ.

ರಾಜಕೀಯ ಕ್ಷೇತ್ರವು ಇಂದು ಉದ್ಯಮವಾಗಿ ಮಾರ್ಪಟ್ಟಿರುವ ಸಂದರ್ಭದಲ್ಲಿ ಶುದ್ಧ ಹಸ್ತದಿಂದ ರಾಜ-ಕಾರಣ ಮಾಡುವುದು ದೊಡ್ಡ ಸವಾಲಾಗಿದೆ. ಆದರೆ ಹೊರಟ್ಟಿಯವರು ತಮ್ಮ ನೈತಿಕ ಬದ್ಧತೆಯಿಂದಲೇ ಈ ಕ್ಷೇತ್ರದಲ್ಲಿ ತಲೆ ಎತ್ತಿ ನಿಂತಿದ್ದಾರೆ. ಅಧಿಕಾರದ ಮದವಿಲ್ಲದೇ, ಜಾತಿ-ಮತ ರಾಜಕಾರಣದಿಂದ ದೂರವಿದ್ದು, ಮೌಲ್ಯಾಧಾರಿತ ರಾಜಕೀಯ ನಡೆಸುತ್ತಿರುವುದು ಅವರ ವಿಶೇಷತೆ.

1980ರ ದಶಕದಲ್ಲಿ ರಾಜಕೀಯಕ್ಕೆ ಕಾಲಿಟ್ಟ ಹೊರಟ್ಟಿಯವರು, ಅಂದಿನಿಂದಲೇ ಸೋಲಿಲ್ಲದೇ ನಿರಂತರವಾಗಿ 8 ಬಾರಿ



ಗೆಲುವು ಸಾಧಿಸಿರುವುದು ಅವರ ವೈಯಕ್ತಿಕ ವ್ಯಕ್ತಿತ್ವದ ಶಕ್ತಿ. ಪಕ್ಷಕ್ಕಿಂತ ವ್ಯಕ್ತಿತ್ವವೇ ಅವರನ್ನು ಗೆಲುವಿನ ದಾರಿಗೆ ಕರೆದುಕೊಂಡು ಹೋಗಿದೆ ಎಂಬುದು ಜನಾಭಿಪ್ರಾಯ.

ಇತ್ತೀಚೆಗೆ ಅವರು 45 ವರ್ಷಗಳ ಸಂಸದೀಯ ಪಯಣವನ್ನು ಪೂರ್ಣಗೊಳಿಸಿದ ಸಂದರ್ಭದಲ್ಲಿ ಹುಬ್ಬಳ್ಳಿಯ ನೆಹರೂ ಮೈದಾನದಲ್ಲಿ ನಡೆದ ಭವ್ಯ ಸಮಾರಂಭದಲ್ಲಿ ಸರ್ವಪಕ್ಷಗಳ ನಾಯಕರು ಅವರ ಸಾಧನೆಯನ್ನು ಕೊಂಡಾಡಿದರು.

ಇದು ಅವರ ಸೇವೆಗೆ ದೊರೆತ ಗೌರವದ ಸಂಕೇತವಾಗಿದೆ.

ಪ್ರಸ್ತುತ ರಾಜಕೀಯದ ಕುಸಿತದ ಬಗ್ಗೆ ಹೊರಟ್ಟಿಯವರು ವ್ಯಕ್ತಪಡಿಸಿರುವ ಬೇಸರವು ಅವರ ಪ್ರಜಾಪ್ರಭುತ್ವದ ಮೇಲಿನ ಕಾಳಜಿಯನ್ನು ತೋರಿಸುತ್ತದೆ. ಮೌಲ್ಯಾಧಾರಿತ ರಾಜಕೀಯದ ಅಗತ್ಯವನ್ನು ಅವರು ಸದಾ ಒತ್ತಿ ಹೇಳುತ್ತಿದ್ದಾರೆ.

ಒಬ್ಬ ಸಾಮಾನ್ಯ ಶಿಕ್ಷಕರಾಗಿ ಆರಂಭಿಸಿದ ಅವರ ಪಯಣ, ಶಿಕ್ಷಕರ ಪ್ರತಿನಿಧಿಯಾಗಿ ವಿಧಾನ ಪರಿಷತ್ತಿಗೆ ಪ್ರವೇಶ, ಸಚಿವ ಸ್ಥಾನ, ಮೂರು ಬಾರಿ ಸಭಾಪತಿ ಸ್ಥಾನ ಹಾಗೂ ಒಂದೇ ಕ್ಷೇತ್ರದಿಂದ ಸತತ 8 ಬಾರಿ ಗೆಲುವು ಸಾಧಿಸಿ ವಿಶ್ವದಾಖಲೆ ನಿರ್ಮಿಸಿರುವುದು ಅತ್ಯಂತ ಪ್ರೇರಣಾದಾಯಕವಾಗಿದೆ. "ಇಂಗ್ಲೆಂಡ್ ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್" ಹಾಗೂ "ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್"ನಲ್ಲಿ ಹೆಸರು ದಾಖಲಿಸಿಕೊಂಡಿರುವುದು ಅವರ ಸಾಧನೆಯ ಮತ್ತೊಂದು ಮೈಲುಗಲ್ಲು.

ಇಂತಹ ಅಪರೂಪದ ವ್ಯಕ್ತಿತ್ವವುಳ್ಳ ಬಸವರಾಜ ಹೊರಟ್ಟಿಯವರು ಮುಂದಿನ ಪೀಳಿಗೆಗೆ ಆದರ್ಶ ನಾಯಕರು. ಅವರ ಜನ್ಮದಿನದ ಅಂಗವಾಗಿ ಅವರಿಗೆ ಶುಭಾಶಯಗಳನ್ನು ಕೋರಿ, ಇನ್ನಷ್ಟು ಕಾಲ ಸಮಾಜ ಸೇವೆ ಮಾಡುವ ಶಕ್ತಿ ಅವರಿಗೆ ದೊರೆಯಲಿ ಎಂದು ಹಾರೈಸೋಣ.



**- ಡಾ. ಬಸವರಾಜ ಧಾರವಾಡ**
ಸಾಂಸ್ಕೃತಿಕ ಚಿಂತಕರು, ಗದಗ.

## ಏ.14ರಂದು ಬಸವರಾಜೇಂದ್ರ ಶ್ರೀಗಳ ರಥೋತ್ಸವ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿನ ಅಲ್ಲಮಪ್ರಭುದೇವರ ಮಠದ 38 ವರ್ಷಗಳ ಮೌನ ತಪಸ್ವಿ ಬಸವರಾಜೇಂದ್ರ ಮಹಾಸ್ವಾಮಿಜಿಗಳ 14ನೇ ವರ್ಷದ ಪುಣ್ಯಸ್ಮರಣೋತ್ಸವ ಅಂಗವಾಗಿ ಎಪ್ರಿಲ್ 14ರಂದು ಸಂಜೆ 4.45ಕ್ಕೆ ರಥೋತ್ಸವ ವೈಭವವಾಗಿ ನಡೆಯಲಿದೆ. ಶ್ರೀಮಠದ ಸಿದ್ಧಲಿಂಗೇಶ್ವರ ಶ್ರೀಗಳ ನೇತೃತ್ವದಲ್ಲಿ ಹೊಸರಿತ್ತಿಯ ಗುದ್ಧಲೀಶ್ವರ ಮಠದ ಗುದ್ಧಲೀಶ್ವರ ಸ್ವಾಮೀಜಿಗಳು, ಹರ್ಲಾಪೂರದ ಡಾ. ಕೊಟ್ಟೂರೇಶ್ವರ ಶ್ರೀಗಳು, ನೀಲಗುಂದದ ಗುಡ್ಡದ ಸುಕ್ಷೇತ್ರದ ಚನ್ನಬಸವ ಶಿವಯೋಗಿಗಳು ರಥೋತ್ಸವಕ್ಕೆ ಚಾಲನೆ ನೀಡಲಿದ್ದಾರೆ. ರಥೋತ್ಸವದಲ್ಲಿ ನಾಡಿನ ವಿವಿಧ ಜಾನಪದ ಕಲಾ ತಂಡಗಳು ಭಾಗವಹಿಸಿ ಮನರಂಜಿಸಲಿವೆ.

ಇದಕ್ಕೂ ಮುನ್ನ ಬೆಳಿಗ್ಗೆ ಅಲ್ಲಮಪ್ರಭುದೇವರ ಗದ್ದುಗೆ ಹಾಗೂ ಬಸವರಾಜೇಂದ್ರ ಶ್ರೀಗಳ ಗದ್ದುಗೆಗೆ ವಿಶೇಷ ಪೂಜೆ ಜರುಗಲಿದೆ. ಬಳಿಕ ಬೆಳಿಗ್ಗೆ 11.45ಕ್ಕೆ ಹರ, ಗುರು ಹಾಗೂ ಚರಮೂರ್ತಿಗಳ ಸಮ್ಮುಖದಲ್ಲಿ ಸಾಮೂಹಿಕ ವಿವಾಹ ಕಾರ್ಯಕ್ರಮವು ವಿಧಿವಿಧಾನಗಳೊಂದಿಗೆ ನಡೆಯಲಿದೆ. ಎಪ್ರಿಲ್ 13ರಂದು ಬೆಳಿಗ್ಗೆ ಪೂರ್ಣಕುಂಭ ಮೇಳ ಹಾಗೂ ಅಡ್ಡಪಲ್ಲಕ್ಕಿ ಮಹೋತ್ಸವವು ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆಯಲಿದೆ. ಸಂಜೆ 7ಕ್ಕೆ ಶಿವಶರಣೆ ಇಟಗಿ ಭೀಮಾಂಬಿಕಾ ದೇವಿ ಪುರಾಣವನ್ನು ಪ್ರವಚನಕಾರ ಕೊಟ್ರಯ್ಯಶಾಸ್ತ್ರಿಗಳು (ನರಗುಂದಮಠ) ಸಮಾಪನಗೊಳಿಸಲಿದ್ದು, ಅಂದಪ್ಪ ಮೆಣಸಿನಕಾಯಿ ಮತ್ತು ಮಲ್ಲೇಶಕುಮಾರ ಅವರು ಸಂಗೀತ ಸೇವೆ ನೀಡಲಿದ್ದಾರೆ. ಎಪ್ರಿಲ್ 15ರಂದು ಲಘು ರಥೋತ್ಸವ ನಡೆಯಲಿದ್ದು, ಪ್ರತಿದಿನ ಅನ್ನಸಂತರ್ಪಣೆ ಕಾರ್ಯಕ್ರಮವೂ ಏರ್ಪಡಿಸಲಾಗಿದೆ ಎಂದು ಅಲ್ಲಮಪ್ರಭುದೇವರ ದೇವಸ್ಥಾನ ಸೇವಾ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

## ಸೊರಟೂರ ಪಿಯು ಕಾಲೇಜಿಗೆ ಉತ್ತಮ ಫಲಿತಾಂಶ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಸಮೀಪದ ಸೊರಟೂರ ಕರ್ನಾಟಕ ಪಬ್ಲಿಕ್ ಶಾಲೆ (ಪದವಿ ಪೂರ್ವ) ಮಹಾವಿದ್ಯಾಲಯದ 2025-26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ತೋರಿದ್ದಾರೆ.

ಪಾರ್ವತಿ ಕಮ್ಮಾರ 554 ಅಂಕಗಳು (92.33%) ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ. ಸಾವಿತ್ರಿ ಡೋಣಿ 516 ಅಂಕಗಳು (86%) ಪಡೆದು ದ್ವಿತೀಯ ಸ್ಥಾನ ಪಡೆದರೆ, ಯಲ್ಲಮ್ಮಾ ಟೋಪಿನ 508 ಅಂಕಗಳು (84.66%) ಪಡೆದು ತೃತೀಯ ಸ್ಥಾನ ಗಳಿಸಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಪ್ರಾಚಾರ್ಯರು ಹಾಗೂ ಉಪನ್ಯಾಸಕರು ಅಭಿನಂದನೆ ಸಲ್ಲಿಸಿದ್ದಾರೆ.

### ಹಳೆಯ ವಿದ್ಯಾರ್ಥಿಗಳ ಸ್ನೇಹ ಸಮ್ಮೇಳನ - ಶಿಕ್ಷಕರಿಗೆ ಸನ್ಮಾನ, "ಬಾಗಿಲ ಬುತ್ತಿ" ಕೃತಿ ಬಿಡುಗಡೆ

## ಲಕ್ಕುಂಡಿಯಲ್ಲಿ ಇಂದು ಗುರುವಂದನೆ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿನ 1983-84ನೇ ಸಾಲಿನ ಪ್ರೌಢಶಾಲೆಯ ಎಸ್ಎಸ್ಎಲ್‌ಸಿ ವಿದ್ಯಾರ್ಥಿಗಳ ಗೆಳೆಯರ ಬಳಗದ ವತಿಯಿಂದ ಜ್ಞಾನದ ಬೆಳಕನ್ನು ನೀಡಿದ ಶಿಕ್ಷಕರಿಗೆ ಗುರುವಂದನೆ ಸಲ್ಲಿಸುವ ಕಾರ್ಯಕ್ರಮವನ್ನು ಎಪ್ರಿಲ್ 12ರಂದು ಆಯೋಜಿಸಲಾಗಿದೆ.

ನಗರದ ಸರಕಾರಿ ಪ್ರಾಥಮಿಕ ದ್ವಿಭಾಷಾ ಮಾಧ್ಯಮ ಮಕ್ಕಳ ಶಾಲೆಯಲ್ಲಿ ಬೆಳಿಗ್ಗೆ 10 ಗಂಟೆಗೆ ಕಾರ್ಯಕ್ರಮ ನಡೆಯಲಿದೆ. ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಶಿಕ್ಷಕರಿಗೆ ಗುರುವಂದನೆ ಸಲ್ಲಿಸಿ ಗೌರವಿಸಲಾಗುತ್ತದೆ.

ಈ ಸಂದರ್ಭದಲ್ಲಿ ಯು.ಎಸ್. ಬೆಂತೂರು, ವಿ.ಐ. ಬಡಿಗೇರ, ವಿ.ಎಸ್. ಘಳಗಿ, ಎಂ.ಎಲ್. ತಳವಾರ ಗುರುಗಳನ್ನು ಹಳೆಯ ವಿದ್ಯಾರ್ಥಿಗಳು ವಿಶೇಷವಾಗಿ ಸನ್ಮಾನಿಸಲಿದ್ದಾರೆ. ನರಗುಂದ ತಾಲೂಕಿನ ಶಿರೋಳ ಗ್ರಾಮದ ಬೈರನಹಟ್ಟಿ ದೊರೆಸ್ವಾಮಿ ವಿರಕ್ತಮಠ ಅವರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದ್ದು, ಲಕ್ಕುಂಡಿ ಅಲ್ಲಮಪ್ರಭುದೇವರ ಮಠದ ಸಿದ್ಧಲಿಂಗ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದಾರೆ. ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಜಿ.ಪಂ ಮಾಜಿ ಸದಸ್ಯ ಶಾಂತಪ್ಪ ಕಲಕೇರಿ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕೆ.ಎಸ್. ಪೂಜಾರ, ಮಾಜಿ ಉಪಾಧ್ಯಕ್ಷ ಪೀರಸಾಬ ನದಾಫ್ ಹಾಗೂ ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ವಿಶೇಷ ಆಮಂತ್ರಿತರಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹಾಗೂ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಶಂಕರ ಹಡಗಲಿ ಉಪಸ್ಥಿತರಿರುವರು.

ಇದೇ ಸಂದರ್ಭದಲ್ಲಿ ಕೃಷಿಯಲ್ಲಿ ಸಾಧನೆ ಮಾಡಿದ ರೈತರು, ಸೈನಿಕರು ಹಾಗೂ ಸೇವಾ ನಿವೃತ್ತ ಸರಕಾರಿ ನೌಕರರನ್ನು ಸನ್ಮಾನಿಸಲಾಗುತ್ತದೆ. ಲೇಖಕ ಮಂಜುನಾಥ ಡೋಣಿ ಅವರ "ಬಾಗಿಲ ಬುತ್ತಿ" ಕೃತಿಯನ್ನು ಶ್ರೀಗಳು ಬಿಡುಗಡೆ ಮಾಡಲಿದ್ದು, ಶಿಕ್ಷಕ ಭೀಮರೆಡ್ಡಿ ಕಾಲವಾಡ ಅವರು ಕೃತಿಯನ್ನು ಪರಿಚಯಿಸಲಿದ್ದಾರೆ ಎಂದು ಗೆಳೆಯರ ಬಳಗದ ಮುಖ್ಯಸ್ಥ ಸಣ್ಣವೀರಪ್ಪ ಬಣವಿ ತಿಳಿಸಿದ್ದಾರೆ.

## ಜಗಜೀವನ ರಾಮ್ ಪುತ್ಥಳಿ ಸ್ಥಾಪನೆಗೆ ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಮಾದಿಗರ ಸಮಾನತೆ ಸಮಿತಿ ವತಿಯಿಂದ ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ ರಾಮ್ ಅವರ 120ನೇ ಜಯಂತಿ ಅಂಗವಾಗಿ ಗದಗ ನಗರದಲ್ಲಿ ಅವರ ಹೆಸರಿನಲ್ಲಿ ಪ್ರಮುಖ ವೃತ್ತದಲ್ಲಿ ಪುತ್ಥಳಿ ಸ್ಥಾಪಿಸಿ, ವೃತ್ತಕ್ಕೆ ನಾಮಕರಣ ಮಾಡುವಂತೆ ಮನವಿ ಸಲ್ಲಿಸಲಾಗಿದೆ.

ಈ ಕುರಿತು ನಗರಸಭೆ ಪೌರಾಯುಕ್ತರಿಗೆ ಶಿಫಾರಸು ಮಾಡುವಂತೆ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಹೆಚ್. ಪಾಟೀಲ ಅವರಿಗೆ ಮನವಿ ನೀಡಲಾಗಿದೆ.

ಈ ಸಂದರ್ಭದಲ್ಲಿ ಯುವರಾಜ ಬಳ್ಳಾರಿ, ಪೃಥ್ವಿ ಪರಾಪುರ, ಗೋವಿಂದರಾಜ ಬಳ್ಳಾರಿ, ವಾಸು ಹುನಗುಂದ, ಬಸವರಾಜ ಕಡೆಮನಿ, ಬಾಲರಾಜ ಅರಬರ, ಕೆಂಚಪ್ಪ ಪೂಜಾರ, ಹೊನ್ನಪ್ಪ ಸಾಕಿ, ಡಿ.ಜಿ.



ಜೋಗಣ್ಣವರ ಹಾಗೂ ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷ ಅಶೋಕ ಮಂದಾಲಿ ಸೇರಿದಂತೆ ಹಲವು ಸದಸ್ಯರು ಉಪಸ್ಥಿತರಿದ್ದರು.


## ವಿದ್ಯಾನಿಕೇತನ ಪಿಯು ಕಾಲೇಜಿಗೆ 98.28% ಫಲಿತಾಂಶ

### ಭಾರ್ಗವಿ ಬೇವಿನಮರ ಜಿಲ್ಲೆಗೆ ಪ್ರಥಮ - ಡಿಸ್ಟಿಂಕ್ಷನ್‌ಗಳಲ್ಲಿ ಪಾಸಾಗಿರುವ ವಿದ್ಯಾರ್ಥಿಗಳು

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ಶ್ರೀ ವಿದ್ಯಾನಿಕೇತನ ಪದವಿ ಪೂರ್ವ ಕಾಲೇಜು 2026ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 98.28ರಷ್ಟು ಫಲಿತಾಂಶ ದಾಖಲಿಸಿ ವಿಜಯನಗರ ಜಿಲ್ಲೆಯಲ್ಲಿ ಭರ್ಜರಿ ಸಾಧನೆ ಮಾಡಿದೆ.

ವಿಜ್ಞಾನ ವಿಭಾಗದ ವಿದ್ಯಾರ್ಥಿನಿ ಭಾರ್ಗವಿ ಬೇವಿನಮರ 600 ಅಂಕಗಳಿಗೆ 592 ಅಂಕಗಳನ್ನು ಪಡೆದು ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ರೂಪಶ್ರೀ ಎಸ್ 591 ಅಂಕಗಳೊಂದಿಗೆ ದ್ವಿತೀಯ ಸ್ಥಾನ, ಹರ್ಷಲಾ ಪ್ರೀತಿ 588 ಅಂಕಗಳೊಂದಿಗೆ ತೃತೀಯ ಸ್ಥಾನ ಗಳಿಸಿದ್ದಾರೆ. ಇನ್ನೂ 7 ವಿದ್ಯಾರ್ಥಿಗಳು 580ಕ್ಕಿಂತ ಹೆಚ್ಚು




ಅಂಕಗಳನ್ನು ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಕಾಲೇಜಿನ ಒಟ್ಟು 582 ವಿದ್ಯಾರ್ಥಿಗಳಲ್ಲಿ 283 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ಹಾಗೂ 266 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದು, ಒಟ್ಟಾರೆ ಅತ್ಯುತ್ತಮ ಫಲಿತಾಂಶ ಸಾಧಿಸಲಾಗಿದೆ.

ರಾಜ್ಯ ಮಟ್ಟದಲ್ಲಿ ಸರಾಸರಿ ಫಲಿತಾಂಶ ಸುಮಾರು 86% ಇದ್ದ ಸಂದರ್ಭದಲ್ಲಿ ವಿದ್ಯಾನಿಕೇತನ ಕಾಲೇಜಿನ ಈ ಸಾಧನೆ ವಿಶೇಷ ಗಮನ ಸೆಳೆದಿದೆ. ಹೆಚ್ಚಿನ ವಿದ್ಯಾರ್ಥಿಗಳು ಉನ್ನತ ಅಂಕಗಳೊಂದಿಗೆ ಉತ್ತೀರ್ಣರಾಗಿದ್ದು, ಕಾಲೇಜಿನ ಶೈಕ್ಷಣಿಕ ಗುಣಮಟ್ಟವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ.

ವಿದ್ಯಾನಿಕೇತನ ಕಾಲೇಜಿನ ಈ ಸಾಧನೆ ಶಿಕ್ಷಣ ಕ್ಷೇತ್ರದಲ್ಲಿ ಹೆಮ್ಮೆಯ ವಿಷಯವಾಗಿದ್ದು, ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಲಿದೆ. ಕಾಲೇಜಿನ ಆಡಳಿತ ಮಂಡಳಿ, ಉಪನ್ಯಾಸಕರು, ಪೋಷಕರು ಹಾಗೂ ಸಾರ್ವಜನಿಕರು ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿದ್ದಾರೆ.

"ಈ ಸಾಧನೆ ವಿದ್ಯಾರ್ಥಿಗಳ ನಿರಂತರ ಪರಿಶ್ರಮ, ಶಿಕ್ಷಕರ ಸಮರ್ಪಿತ ಬೋಧನೆ ಹಾಗೂ ಪೋಷಕರ ಸಹಕಾರದ ಫಲವಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮ ಸಾಧನೆ ಮಾಡಲು ನಾವು ಬದ್ಧರಾಗಿದ್ದೇವೆ"
**- ಶರತ್ ಚಂದ್ರ, ಚೇರ್ಮನ್.**

ಕಾಲೇಜಿನ ಪ್ರಿನ್ಸಿಪಾಲರಾದ ಶೇಖರ್, ಉಪನ್ಯಾಸಕರು ಹಾಗೂ ಆಡಳಿತ ಮಂಡಳಿ ವಿದ್ಯಾರ್ಥಿಗಳ ಸಾಧನೆಗೆ ಹರ್ಷ ವ್ಯಕ್ತಪಡಿಸಿ, ಭವಿಷ್ಯದಲ್ಲೂ ಇದೇ ರೀತಿಯ ಶ್ರೇಷ್ಠ ಫಲಿತಾಂಶ ಮುಂದುವರಿಯಲಿ ಎಂದು ಆಶಾಭಾವನೆ ವ್ಯಕ್ತಪಡಿಸಿದ್ದಾರೆ.

### 600ಕ್ಕೆ 595 ಅಂಕ; ತಾಲೂಕಿನ ಹೆಗ್ಗಳಿಕೆಗೆ ಕಾರಣವಾದ ವಿದ್ಯಾರ್ಥಿನಿ

## ಉಪ್ಪಾರಗಟ್ಟಿಯ ಭೂಮಿಕಾ ರಾಜ್ಯಕ್ಕೆ 6ನೇ ರ್‍ಯಾಂಕ್

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಉಪ್ಪಾರಗಟ್ಟಿ ಗ್ರಾಮದ ಕುಮಾರಿ ಎನ್.ಎ. ಭೂಮಿಕಾ ಅವರು 2026ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಾಣಿಜ್ಯ ವಿಭಾಗದಲ್ಲಿ ರಾಜ್ಯ ಮಟ್ಟದಲ್ಲಿ 6ನೇ ರ್‍ಯಾಂಕ್ ಪಡೆದು ಗಮನಾರ್ಹ ಸಾಧನೆ ಮಾಡಿದ್ದಾರೆ.

ಅಂಗಡಿ ನಾಗರಾಜ್ (ಶಿಕ್ಷಕರು) ಹಾಗೂ ಅಂಗಡಿ ಶ್ರುತಿ ದಂಪತಿಗಳ ಪುತ್ರಿಯಾಗಿರುವ ಭೂಮಿಕಾ, ಉಡುಪಿ ಜಿಲ್ಲೆಯ ಕಟಪಾಡಿಯ ತ್ರಿಷಾ ಪಿಯು ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದರು. ಅವರು 600 ಅಂಕಗಳಿಗೆ 595 ಅಂಕಗಳನ್ನು ಗಳಿಸುವ ಮೂಲಕ ಅತ್ಯುತ್ತಮ ಸಾಧನೆ ತೋರಿದ್ದಾರೆ.



ಈ ಸಾಧನೆಯಿಂದ ಉಪ್ಪಾರಗಟ್ಟಿ ಗ್ರಾಮ, ಹಗರಿಬೊಮ್ಮನಹಳ್ಳಿ ತಾಲೂಕು ಹಾಗೂ ಜಿಲ್ಲೆಗೆ ಹೆಗ್ಗಳಿಕೆ ತಂದಿರುವುದಾಗಿ, ವಿದ್ಯಾರ್ಥಿನಿಯ ತಂದೆ ಹಾಗೂ ಶಿಕ್ಷಕರಾದ ಅಂಗಡಿ ನಾಗರಾಜ್ ಅವರು ವಿಜಯಸಾಕ್ಷಿ ಪತ್ರಿಕೆಗೆ ತಿಳಿಸಿದ್ದಾರೆ. ಈ ಸಾಧನೆ ಗ್ರಾಮಸ್ಥರಲ್ಲಿ ಹರ್ಷದ ವಾತಾವರಣ ಮೂಡಿಸಿದೆ.

# ಬೆಳೆ ವಿಮೆ, ಪರಿಹಾರ ತಾರತಮ್ಯ ವಿರುದ್ಧ ರೈತರ ಆಕ್ರೋಶ

### ಕುಸುಬೆ ಖರೀದಿ ಮಿತಿ ಹೆಚ್ಚಿಸುವಂತೆ ಒತ್ತಾಯ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬೆಳೆ ವಿಮೆ, ಬೆಳೆ ಹಾನಿ ಪರಿಹಾರ ವಿತರಣೆಯಲ್ಲಿನ ತಾರತಮ್ಯ ಹಾಗೂ ಬೆಂಬಲ ಬೆಲೆ ಯೋಜನೆಯಡಿ ಕುಸುಬೆ ಖರೀದಿ ಮಿತಿಯನ್ನು ಹೆಚ್ಚಿಸುವಂತೆ ಆಗ್ರಹಿಸಿ ರೈತ ಸೇನಾ ವತಿಯಿಂದ ನರೇಗಲ್‌ದಲ್ಲಿ ಭಾರಿ ಪ್ರತಿಭಟನೆ ನಡೆಯಿತು.

ಗುರುವಾರ ಬೆಳಿಗ್ಗೆ ಸಂತೆ ಬಜಾರಿನಿಂದ ಹೊಸ ಬಸ್ ನಿಲ್ದಾಣದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ರೈತರು, ಬಳಿಕ ಮಾನವ ಸರಪಳಿ ನಿರ್ಮಿಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಉಪ ತಹಸೀಲ್ದಾರ್ ಕಚೇರಿಯ ಮುಂದೆ ನಡೆದ ಸಭೆಯಲ್ಲಿ ಮಾತನಾಡಿದ ರೈತ ಸೇನಾ ಅಧ್ಯಕ್ಷ ಶರಣಪ್ಪ ಧರ್ಮಾಯತ, ಮುಂಗಾರಿ ಹಾಗೂ ಹಿಂಗಾರಿ ಬೆಳೆ ಹಾನಿಗೆ



ಸಂಬಂಧಿಸಿದ ಪರಿಹಾರವನ್ನು ಎಲ್ಲಾ ರೈತರಿಗೆ ನೀಡಿಲ್ಲ ಎಂದು ಆರೋಪಿಸಿದರು. ಕೆಲವರಿಗೆ ಮಾತ್ರ ಪರಿಹಾರ ದೊರೆತಿದ್ದು, ಅನೇಕ ರೈತರು ವಂಚಿತರಾಗಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

"ಬೆಳೆ ವಿಮೆ ಮತ್ತು ಪರಿಹಾರ ವಿತರಣೆಗೆ ಎಫ್ಐಡಿ ಹಾಗೂ ಇ-ಕೆವೈಸಿ ಕಡ್ಡಾಯವಾಗಿದ್ದು, ನರೇಗಲ್ಲ ಹೋಬಳಿಯಲ್ಲಿ ಸುಮಾರು 8500 ರೈತರ ವಿವರಗಳಲ್ಲಿ ವ್ಯತ್ಯಯಗಳಿವೆ. ರೈತರು ತಕ್ಷಣ ದಾಖಲೆಗಳನ್ನು ಸರಿಪಡಿಸಿದರೆ ಪರಿಹಾರ ವಿತರಣೆಯಾಗಲಿದೆ"
**- ನಾಗರಾಜ ಕೆ., ತಹಸೀಲ್ದಾರ್**

ರೈತ ಮುಖಂಡ ಚಂದ್ರು ಹೊನವಾಡ ಮಾತನಾಡಿ, ನಾಫೇಡ್ ಬೆಂಬಲ ಬೆಲೆ ಯೋಜನೆಯಡಿ ಪ್ರತಿ ರೈತನಿಂದ ಕೇವಲ 20 ಕ್ವಿಂಟಾಲ್ ಕುಸುಬೆ ಖರೀದಿ ಮಾಡುತ್ತಿರುವುದು ಅವೈಜ್ಞಾನಿಕವಾಗಿದ್ದು, ಅದನ್ನು 50 ಕ್ವಿಂಟಾಲ್‌ಗೆ ಹೆಚ್ಚಿಸಬೇಕೆಂದು ಆಗ್ರಹಿಸಿದರು.

ರೈತ ಮುಖಂಡ ಆನಂದ ಕೋಟಗಿ ಮಾತನಾಡಿ, ಖಾಸಗಿ ಪವನ ವಿದ್ಯುತ್ ಕಂಪನಿಗಳ ಭಾರಿ ವಾಹನಗಳ ಸಂಚಾರದಿಂದ ಗ್ರಾಮೀಣ ರಸ್ತೆಗಳು ಹದಗೆಟ್ಟಿದ್ದು, ಮಳೆಗಾಲದಲ್ಲಿ ಸಂಚಾರಕ್ಕೆ ತೊಂದರೆ ಉಂಟಾಗಿದೆ ಎಂದು ಆರೋಪಿಸಿದರು. ಕಂಪನಿಗಳ ಸಾಮಾಜಿಕ ಹೊಣೆಗಾರಿಕೆ ನಿಧಿಯಿಂದ ಸರ್ವಋತು ರಸ್ತೆಗಳನ್ನು ನಿರ್ಮಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯ ಸಂದರ್ಭದಲ್ಲಿ ಉಪ ತಹಸೀಲ್ದಾರ್ ಜಿ.ಎಸ್. ದೊಡ್ಡಮನಿ, ಗ್ರಾಮಾಡಳಿತಾಧಿಕಾರಿ ಸಿಂಧೂ ಟಿ., ಎಎಸ್ಐ ಶೇಖರ ಹೊಸಳ್ಳಿ ಸೇರಿದಂತೆ ಹಲವರು ಹಾಜರಿದ್ದರು.

# ಅಂಚೆ ಸೇವೆಗಳ ಸದುಪಯೋಗಪಡಿಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಅಂಚೆ ಇಲಾಖೆ ಪಟ್ಟಣ ಹಾಗೂ ಗ್ರಾಮೀಣ ಜನತೆಗೆ ವಿವಿಧ ಸೇವೆಗಳನ್ನು ಒದಗಿಸುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದು ಗದಗ ಜಿಲ್ಲಾ ಅಂಚೆ ಅಧೀಕ್ಷಕ ಷಣ್ಮುಖಪ್ಪ ಶಿರಹಟ್ಟಿ ಹೇಳಿದರು.

ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದ ಸಭಾಭವನದಲ್ಲಿ ಪ್ರಗತಿ ಪತ್ತಿನ ಸೌಹಾರ್ದ ಸಹಕಾರಿ ಸಂಘ ಮತ್ತು ಭಾರತಿಯ ಅಂಚೆ ಇಲಾಖೆ ಗದಗ ವಿಭಾಗದ ಸಹಯೋಗದಲ್ಲಿ ಆಯೋಜಿಸಿದ ಅಂಚೆ ಜನಸಂಪರ್ಕ ಅಭಿಯಾನ ಹಾಗೂ ಆಧಾರ ನೋಂದಣಿ-ತಿದ್ದುಪಡೆ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಂಚೆ ಇಲಾಖೆ ಕೇವಲ ಅಂಚೆ ವಿತರಣೆಗೆ ಸೀಮಿತವಲ್ಲದೆ, ಜೀವ ವಿಮೆ, ಆಧಾರ ತಿದ್ದುಪಡೆ, ಕೋರ ಬ್ಯಾಂಕಿಂಗ್, ಉಳಿತಾಯ ಖಾತೆ, ಹಣ ವಹಿವಾಟು ಸೇರಿದಂತೆ ಹಲವು ಸೇವೆಗಳನ್ನು ಒದಗಿಸುತ್ತಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಕೆ.ಎಲ್. ಕರಿಗೌಡ್ರ ಅವರು ಕಡಿಮೆ ವೆಚ್ಚದಲ್ಲಿ ಹೆಚ್ಚಿನ ಸೌಲಭ್ಯಗಳನ್ನು ನೀಡುವ ಅಂಚೆ ಇಲಾಖೆಯ ಸೇವೆಯನ್ನು ಎಲ್ಲರೂ ಬಳಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಎಸ್.ಎನ್. ನೀಲಗುಂದ, ಎಂ.ಡಿ. ಬಟ್ಟೂರ, ಡಾ. ಎಸ್.ಸಿ. ಚವಡಿ, ಬಿ.ವಿ. ಸುಂಕಾಪೂರ, ನಾಗರಾಜ ದೇಶಪಾಂಡೆ ಸೇರಿದಂತೆ ಅಂಚೆ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.




# ಗ್ಯಾಸ್ ಬಂಕ್‌ಗಳಲ್ಲಿ ದರ-ದಾಸ್ತಾನು ಫಲಕ ಕಡ್ಡಾಯ

**ಸರಬರಾಜು ವ್ಯತ್ಯಯ ತಾತ್ಕಾಲಿಕ – ಸಹಕಾರದಿಂದ ಸಮಸ್ಯೆ ಪರಿಹಾರ ಸಾಧ್ಯ: ಜಿಲ್ಲಾಧಿಕಾರಿ ಸ್ನೇಹಲ್ ಆರ್.**




> "ಸಂಕಷ್ಟ ಸಂದರ್ಭದಲ್ಲಿ ಪರಸ್ಪರ ಸಹಕಾರ ಮತ್ತು ಪಾರದರ್ಶಕತೆಯಿಂದಲೇ ಸಮಸ್ಯೆ ಪರಿಹಾರ ಸಾಧ್ಯ. ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ."
> – ಸ್ನೇಹಲ್ ಆರ್. ಜಿಲ್ಲಾಧಿಕಾರಿ.

### ಮುಖ್ಯ ಸೂಚನೆಗಳು

* ಗ್ಯಾಸ್ ಬಂಕ್‌ಗಳಲ್ಲಿ ದರ ಮತ್ತು ದಾಸ್ತಾನು ಮಾಹಿತಿ ಫಲಕ ಕಡ್ಡಾಯ
* ಪಾರದರ್ಶಕ ವಿತರಣೆಗೆ ಬಂಕ್ ಮಾಲೀಕರಿಗೆ ಸೂಚನೆ
* ಗ್ರಾಹಕರೊಂದಿಗೆ ವಿನಯದಿಂದ ವರ್ತನೆ ಅಗತ್ಯ
* ಕುಡಿಯುವ ನೀರು, ಶೌಚಾಲಯ, ಗಾಳಿ ಸೌಲಭ್ಯ ಕಡ್ಡಾಯ
* ಮೇಲುಸ್ತುವಾರಿ ಸಮಿತಿ ರಚನೆ, ನೋಡಲ್ ಅಧಿಕಾರಿ ನೇಮಕ
* ದೂರುಗಳಿಗೆ ಸಹಾಯವಾಣಿ ಸಂಖ್ಯೆ: 1077

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಎಲ್‌ಪಿಜಿ ಹಾಗೂ ಸಿಎನ್‌ಜಿ ಗ್ಯಾಸ್ ಬಂಕ್‌ಗಳಲ್ಲಿ ಪ್ರತಿದಿನದ ಗ್ಯಾಸ್ ದರ ಮತ್ತು ದಾಸ್ತಾನು ವಿವರಗಳನ್ನು ಮಾಹಿತಿ ಫಲಕದಲ್ಲಿ ಕಡ್ಡಾಯವಾಗಿ ಪ್ರದರ್ಶಿಸಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರ ಸೂಚನೆಯಂತೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಪಾಶ್ಚಿಮಾತ್ಯ ದೇಶಗಳ ಯುದ್ಧಭೀತಿಯಿಂದ ಗ್ಯಾಸ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿದ್ದು, ಇದು ತಾತ್ಕಾಲಿಕವಾಗಿದ್ದು ಶೀಘ್ರದಲ್ಲೇ ಸಮಸ್ಯೆ ಪರಿಹಾರವಾಗಲಿದೆ ಎಂದು ತಿಳಿಸಿದರು. ಜಿಲ್ಲೆಯಲ್ಲಿ 21 ಆಟೋ ಎಲ್‌ಪಿಜಿ ಹಾಗೂ 11 ಸಿಎನ್‌ಜಿ ಬಂಕ್‌ಗಳಿದ್ದು, ಹಂತ ಹಂತವಾಗಿ ದಾಸ್ತಾನು ಲಭ್ಯವಾಗುತ್ತಿದೆಯಾದರೂ ವಿತರಣೆಯಲ್ಲಿ ವಿಳಂಬ ಉಂಟಾಗಿದೆ. ಈ ಸಂದರ್ಭದಲ್ಲಿ ಆಟೋ ಚಾಲಕರು ಹಾಗೂ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ, ಸಹಕಾರ ನೀಡಬೇಕು ಎಂದರು.

ಬಂಕ್ ಮಾಲೀಕರು ಪಾರದರ್ಶಕವಾಗಿ ಗ್ಯಾಸ್ ವಿತರಿಸಬೇಕು. ಗ್ರಾಹಕರೊಂದಿಗೆ ಸಹನಶೀಲವಾಗಿ ವರ್ತಿಸಿ, ಶುದ್ಧ ಕುಡಿಯುವ ನೀರು, ಸ್ವಚ್ಛ ಶೌಚಾಲಯ, ಗಾಳಿ ತುಂಬುವ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಎಂದು ಸೂಚಿಸಿದರು. ಗ್ಯಾಸ್ ವಿತರಣೆಯ ಮೇಲ್ವಿಚಾರಣೆಗಾಗಿ ತೂಕ-ಅಳತೆ ಇಲಾಖೆ, ಆಹಾರ ಇಲಾಖೆ ಅಧಿಕಾರಿಗಳು, ಬಂಕ್ ಮಾಲೀಕರು ಹಾಗೂ ಆಟೋ ಚಾಲಕರ ಸಂಘದ ಪ್ರತಿನಿಧಿಗಳನ್ನು ಒಳಗೊಂಡ ಮೇಲುಸ್ತುವಾರಿ ಸಮಿತಿಯನ್ನು ರಚಿಸಲಾಗುತ್ತಿದ್ದು, ನೋಡಲ್ ಅಧಿಕಾರಿಯನ್ನು ನೇಮಿಸಲಾಗುತ್ತದೆ ಎಂದು ತಿಳಿಸಿದರು. ಸಾರ್ವಜನಿಕರು ಯಾವುದೇ ಸಮಸ್ಯೆ ಎದುರಾದಲ್ಲಿ ಜಿಲ್ಲಾಡಳಿತದ ಸಹಾಯವಾಣಿ ಸಂಖ್ಯೆ 1077ಕ್ಕೆ ಕರೆ ಮಾಡಿ ದೂರು ನೀಡಬಹುದು ಎಂದರು.

**ಪ್ರತಿ ತಿಂಗಳು ವರದಿ ಸಲ್ಲಿಕೆ ಕಡ್ಡಾಯ – ಕನ್ನಡ ಜಾಗೃತಿ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್**

# ಜಿಲ್ಲೆಯಲ್ಲಿ ಕನ್ನಡ ಅನುಷ್ಠಾನಕ್ಕೆ ಕಟ್ಟುನಿಟ್ಟಿನ ಸೂಚನೆ



> "ಜಿಲ್ಲೆಯಲ್ಲಿ ಕನ್ನಡ ಅನುಷ್ಠಾನ ಪರಿಣಾಮಕಾರಿಯಾಗಿ ಜಾರಿಯಾಗಲು ಎಲ್ಲಾ ಇಲಾಖೆಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು."
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ.

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಕನ್ನಡ ಭಾಷೆಯ ಅನುಷ್ಠಾನ ಪರಿಣಾಮಕಾರಿಯಾಗಿ ಜಾರಿಯಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲಾ ಮಟ್ಟದ ಕನ್ನಡ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ತಿಂಗಳ 5ನೇ ತಾರೀಖಿನೊಳಗೆ ಎಲ್ಲಾ ಇಲಾಖೆಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಕನ್ನಡ ಅನುಷ್ಠಾನ ವರದಿ ಸಲ್ಲಿಸುವಂತೆ ಸೂಚಿಸಿದರು. ರಾಜ್ಯ ಸರ್ಕಾರದ ಇಲಾಖೆಗಳು, ಸ್ವಾಯತ್ತ ಸಂಸ್ಥೆಗಳು, ಸಹಕಾರ ಸಂಘಗಳು, ಬ್ಯಾಂಕುಗಳು, ಶೈಕ್ಷಣಿಕ ಸಂಸ್ಥೆಗಳು ಹಾಗೂ ಖಾಸಗಿ ಕೈಗಾರಿಕೆಗಳು ಕನ್ನಡದಲ್ಲಿಯೇ ಪತ್ರ ವ್ಯವಹಾರ ನಡೆಸಬೇಕು ಎಂದು ಹೇಳಿದರು.

ಪ್ರತಿ ತಿಂಗಳು ನಡೆಯುವ ಕೆಡಿಪಿ ಸಭೆಯ ಅಜೆಂಡಾದಲ್ಲೂ ಕನ್ನಡ ಅನುಷ್ಠಾನದ ಪ್ರಗತಿ ಬಗ್ಗೆ ಚರ್ಚೆ ನಡೆಯಬೇಕು ಎಂದು ತಿಳಿಸಿದರು. ತಾಲೂಕು ಮಟ್ಟದಲ್ಲಿ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕನ್ನಡ ಜಾಗೃತಿ ಸಮಿತಿ ಸಭೆಗಳನ್ನು ನಡೆಸಿ, ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗೆ ಕ್ರಮ ಕೈಗೊಳ್ಳಬೇಕು. ಬೇರೆ ರಾಜ್ಯಗಳಿಂದ ಬಂದ ಬ್ಯಾಂಕ್ ನೌಕರರಿಗೆ ಕನ್ನಡ ತರಬೇತಿ ನೀಡುವಂತೆ ಹಾಗೂ ಕಡ್ಡಾಯವಾಗಿ ತರಬೇತಿಯಲ್ಲಿ ಭಾಗವಹಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುವ ವ್ಯಾಪಾರ, ಕೈಗಾರಿಕೆ, ಹೋಟೆಲ್ ಹಾಗೂ ಸಾರಿಗೆ ಕ್ಷೇತ್ರಗಳಲ್ಲಿ ಕನ್ನಡ ನಾಮಫಲಕಗಳ ಪ್ರದರ್ಶನ ಕಡ್ಡಾಯವಾಗಬೇಕು ಎಂಬ ವಿಷಯವೂ ಸಭೆಯಲ್ಲಿ ಚರ್ಚೆಗೆ ಬಂದಿತು. ಸಭೆಯಲ್ಲಿ ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಕಿಶೋರಬಾಬು, ಅಶೋಕ ಬರಗುಂಡಿ, ರಾಜಶೇಖರ ದಾನರೆಡ್ಡಿ, ಮುತ್ತು ಬಿಳಿಯಲಿ ಸೇರಿದಂತೆ ಹಲವು ಸದಸ್ಯರು ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಎಂ.ಎನ್. ತುಂಬರಮಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

# ಏ.14ರಂದು ಅಂಬೇಡ್ಕರ್-ಜಗಜೀವನ ರಾಮ್ ಜಯಂತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಂವಿಧಾನ ಶಿಲ್ಪಿ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಹಾಗೂ ಹಸಿರು ಕ್ರಾಂತಿಯ ಹರಿಕಾರ, ರಾಷ್ಟ್ರನಾಯಕ, ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಮ್ ಅವರ 119ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಎಪ್ರಿಲ್ 14, 2026ರಂದು ಗದಗ ನಗರದಲ್ಲಿ ಭವ್ಯವಾಗಿ ಆಚರಿಸಲಾಗುತ್ತಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ಗದಗ-ಬೆಟಗೇರಿ ನಗರಸಭೆ ಇವರ ಸಂಯುಕ್ತ ಆಶ್ರಯದಲ್ಲಿ ಮಧ್ಯಾಹ್ನ 12 ಗಂಟೆಗೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಮುಖ್ಯ ವೇದಿಕೆ ಕಾರ್ಯಕ್ರಮ ಜರುಗಲಿದೆ.

ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಉದ್ಘಾಟಿಸಲಿದ್ದು, ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ. ಎಚ್.ಸಿ. ಮಹದೇವಪ್ಪ ಘನ ಉಪಸ್ಥಿತಿ ವಹಿಸಲಿದ್ದಾರೆ.

### ಮೆರವಣಿಗೆ ಮಾರ್ಗ

ನಗರಸಭೆ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಬಳಿಕ ಮೆರವಣಿಗೆ ಪ್ರಾರಂಭವಾಗಿ ಮಹಾತ್ಮಾ ಗಾಂಧಿ ಸರ್ಕಲ್, ಮಹೇಂದ್ರಕರ್ ಸರ್ಕಲ್, ಟಾಂಗಾ ಕೂಟ್, ಬಸವೇಶ್ವರ ಸರ್ಕಲ್, ಗುಜ್ಜರಬಸ್ತಿ, ಮುಳಗುಂದ ನಾಕಾ ಮಾರ್ಗವಾಗಿ ಅಂಬೇಡ್ಕರ್ ಭವನ ತಲುಪಲಿದೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್, ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಡಿ.ಆರ್. ಪಾಟೀಲ, ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ರಮಣದೀಪ್ ಚೌಧರಿ ಹಾಗೂ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ. ಆಗಮಿಸಲಿದ್ದಾರೆ.

ಸರ್ಕಾರಿ ಶಾಲೆಯ ನಿವೃತ್ತ ಮುಖ್ಯೋಪಾಧ್ಯಾಯ ಹಾಗೂ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಎಸ್.ಎನ್. ಬಳ್ಳಾರಿ ಅವರು ಡಾ. ಅಂಬೇಡ್ಕರ್ ಕುರಿತು ಉಪನ್ಯಾಸ ನೀಡಲಿದ್ದು, ಪ್ರೊ. ಡಿ.ಜಿ. ಜೋಗಣ್ಣನವರ ಅವರು ಡಾ. ಜಗಜೀವನ ರಾಮ್ ಕುರಿತು ಮಾತನಾಡಲಿದ್ದಾರೆ.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಹಾಗೂ ಪೌರಾಯುಕ್ತ ರಾಜಾರಾಮ ಪವಾರ ಕಾರ್ಯಕ್ರಮಕ್ಕೆ ಸ್ವಾಗತ ಕೋರಿದ್ದಾರೆ.

# ಗಂಗಾವತಿ ಭೀಮಪ್ಪ ಪಿಯು ಕಾಲೇಜಿನಲ್ಲಿ 65.15% ಫಲಿತಾಂಶ

**ಕಳೆದ ವರ್ಷದಿಗಿಂತ 33% ಏರಿಕೆ – ಮೂರು ವಿಭಾಗಗಳಲ್ಲಿ ವಿದ್ಯಾರ್ಥಿಗಳ ಸಾಧನೆ**




**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಶ್ರೀ ಗಂಗಾವತಿ ಭೀಮಪ್ಪನವರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 65.15ರಷ್ಟು ಫಲಿತಾಂಶ ದಾಖಲಾಗಿದೆ ಎಂದು ಪ್ರಾಚಾರ್ಯ ಎಂ.ಕೆ. ದುರುಗಪ್ಪ ತಿಳಿಸಿದ್ದಾರೆ.

2026ನೇ ಸಾಲಿನ ಫಲಿತಾಂಶದ ಪ್ರಕಾರ ಒಟ್ಟು 746 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದು, 735 ವಿದ್ಯಾರ್ಥಿಗಳು ಹಾಜರಾಗಿದ್ದಾರೆ. ಇವರಲ್ಲಿ 486 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಒಟ್ಟು ಶೇಕಡಾ 66.12ರಷ್ಟು ಫಲಿತಾಂಶ ದೊರೆತಿದ್ದು, ಉನ್ನತ ಶ್ರೇಣಿಯಲ್ಲಿ 50, ಪ್ರಥಮ ಶ್ರೇಣಿಯಲ್ಲಿ 285, ದ್ವಿತೀಯ ಶ್ರೇಣಿಯಲ್ಲಿ 123 ಹಾಗೂ ಉತ್ತೀರ್ಣ ಶ್ರೇಣಿಯಲ್ಲಿ 28 ವಿದ್ಯಾರ್ಥಿಗಳು ಪಾಸಾಗಿದ್ದಾರೆ.

**ಕಲಾ ವಿಭಾಗ:** ಸೊನ್ನದ ನಾಗರಾಜ – 575, ಎಚ್. ರೇಣುಕಾ – 569, ತಿಪ್ಪಮ್ಮ – 566, ಟಿ. ಸೌಂದರ್ಯ – 566

**ವಾಣಿಜ್ಯ ವಿಭಾಗ :** ಎಂ.ಎಸ್. ನಿತಿನ್ – 570, ಎಂ. ಸಂಜನಾ – 568, ಪಿ. ಸಿಂಧು – 567

ವಿಜ್ಞಾನ ವಿಭಾಗ : ಎಂ.ಎಂ. ವೀಣಾ – 557, ಪಿ.ಎಂ. ಅಲಿಷ ಬಾನು – 556, ಬಿ. ಲಕ್ಷ್ಮಿ – 549

ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ 33% ಹೆಚ್ಚು ಫಲಿತಾಂಶ ಕಂಡುಬಂದಿದ್ದು, ವಿದ್ಯಾರ್ಥಿಗಳ ಸಾಧನೆಗೆ ಕಾಲೇಜು ಆಡಳಿತ ಮಂಡಳಿ ಹಾಗೂ ಶಿಕ್ಷಕರು ಸಂತೋಷ ವ್ಯಕ್ತಪಡಿಸಿದ್ದಾರೆ.

**ಹಗರಿಬೊಮ್ಮನಹಳ್ಳಿ:** ಶ್ರೀ ಕಾಗಿನೆಲೆ ಕನಕ ಗುರು ಪೀಠದ ಜಗದ್ಗುರುಗಳಾದ ಶ್ರೀ ನಿರಂಜನ ನಂದಪುರಿ ಸ್ವಾಮಿಗಳ 50ನೇ ಹುಟ್ಟುಹಬ್ಬದ ಅಂಗವಾಗಿ ವೃದ್ಧರಿಗೆ ಹೋಳಿಗೆ ಪ್ರಸಾದ ವಿತರಿಸುವ ಸೇವಾ ಕಾರ್ಯ ಹಮ್ಮಿಕೊಳ್ಳಲಾಗಿತ್ತು. ಶ್ರೀಮತಿ ಉತ್ತಂಗಿ ಹಿರೇಮಠದ ರುದ್ರಮ್ಮ ಕೊಟ್ರಸ್ವಾಮಿ ಅನಾಥಾಶ್ರಮ ಸೇವಾ ಟ್ರಸ್ಟ್ ವತಿಯಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ವೃದ್ಧರಿಗೆ ಹೋಳಿಗೆ ಪ್ರಸಾದ ಮಾಡಿಸಲಾಯಿತು. ಈ ಸಂದರ್ಭದಲ್ಲಿ ನಿಕಟ ಪೂರ್ವ ಅಧ್ಯಕ್ಷ ಮರಿ ರಾಮಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೋರಿ ಗೋಣಿಬಸಪ್ಪ, ಪುರಸಭೆ ನಾಮ ನಿರ್ದೇಶಕ ಯು. ಬಾಳಪ್ಪ ಸೇರಿದಂತೆ ಟ್ರಸ್ಟ್‌ನ ಮುಖಂಡರು ಹಾಗೂ ವೃದ್ಧರು ಉಪಸ್ಥಿತರಿದ್ದರು.



# ಗದಗದಲ್ಲಿ ಜನಗಣತಿ ಕಾರ್ಯಕ್ಕೆ ಗಣತಿದಾರರಿಗೆ ವಿಶೇಷ ತರಬೇತಿ

**ಶಿಸ್ತು, ನಿಖರತೆ ಮತ್ತು ಜನಸಹಭಾಗಿತ್ವಕ್ಕೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಒತ್ತು**



> "ಜನಗಣತಿ ದೇಶದ ಅಭಿವೃದ್ಧಿಗೆ ಮೂಲಭೂತ ಆಧಾರವಾಗಿದ್ದು, ಯಾವುದೇ ತಪ್ಪಿಲ್ಲದೆ ಶಿಸ್ತು ಹಾಗೂ ಸಂಯಮದಿಂದ ಕಾರ್ಯನಿರ್ವಹಿಸಬೇಕು"
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ.

**■ವಿಜಯಸಾಕ್ಷಿ ಸುದ್ದಿ, ಗದಗ**

ಜನಗಣತಿ ಕಾರ್ಯವನ್ನು ಸುಗಮವಾಗಿ ಹಾಗೂ ಪರಿಣಾಮಕಾರಿಯಾಗಿ ನಡೆಸುವ ಉದ್ದೇಶದಿಂದ ಗದಗ ನಗರ ಮತ್ತು ಗ್ರಾಮೀಣ ಭಾಗಗಳ ಗಣತಿದಾರರಿಗೆ ಮೂರು ದಿನಗಳ ಸಮಗ್ರ ತರಬೇತಿ ಕಾರ್ಯಕ್ರಮವನ್ನು ನಗರದ ಗುರುಬಸವ ಪ್ರೌಢಶಾಲೆಯಲ್ಲಿ ಯಶಸ್ವಿಯಾಗಿ ನಡೆಯಿತು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ಮಾರ್ಗದರ್ಶನದಲ್ಲಿ ನಡೆದ ಈ ತರಬೇತಿ ಕಾರ್ಯಕ್ರಮದಲ್ಲಿ ಗಣತಿದಾರರಿಗೆ ಕಾರ್ಯಪದ್ಧತಿ, ಮಾಹಿತಿಯ ಸಂಗ್ರಹಣೆ ವಿಧಾನಗಳು, ತಂತ್ರಜ್ಞಾನ ಬಳಕೆ ಹಾಗೂ ಕ್ಷೇತ್ರ ಮಟ್ಟದ ಸವಾಲುಗಳನ್ನು ಎದುರಿಸುವ ಬಗ್ಗೆ ವಿವರವಾದ ಮಾರ್ಗದರ್ಶನ ನೀಡಲಾಯಿತು.

ತರಬೇತಿಯಲ್ಲಿ ಮನೆಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವ ವಿಧಾನ, ಪ್ರತಿ ಕುಟುಂಬದ ಸಾಮಾಜಿಕ-ಆರ್ಥಿಕ ಸ್ಥಿತಿಗತಿ ದಾಖಲಿಸುವ ಕ್ರಮ, ಮಾಹಿತಿಯ ನಿಖರತೆ ಕಾಪಾಡುವ ಅಗತ್ಯತೆ ಹಾಗೂ ಗೌಪ್ಯತೆ ಕಾಯ್ದುಕೊಳ್ಳುವ ಮಹತ್ವವನ್ನು ವಿವರಿಸಲಾಯಿತು. ಇತ್ತೀಚಿನ ತಂತ್ರಜ್ಞಾನವನ್ನು ಬಳಸಿಕೊಂಡು ಡಿಜಿಟಲ್ ಮೂಲಕ ಮಾಹಿತಿ ದಾಖಲಿಸುವ ವಿಧಾನಗಳನ್ನೂ ಪರಿಚಯಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು, ಜನಗಣತಿ ದೇಶದ ಯೋಜನೆ ರೂಪಿಸುವ ಮೂಲಭೂತ ಆಧಾರವಾಗಿದ್ದು, ಶಿಕ್ಷಣ, ಆರೋಗ್ಯ, ವಸತಿ, ಉದ್ಯೋಗ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸರ್ಕಾರದ ಯೋಜನೆಗಳು ರೂಪಗೊಳ್ಳಲು ಇದರ ಮಾಹಿತಿ ಬಹುಮುಖ್ಯವಾಗುತ್ತದೆ ಎಂದು ಹೇಳಿದರು. ಆದ್ದರಿಂದ ಗಣತಿದಾರರು ಯಾವುದೇ ರೀತಿಯ ತಪ್ಪಿಲ್ಲದೆ, ಶಿಸ್ತು ಮತ್ತು ಸಂಯಮದಿಂದ ತಮ್ಮ ಕರ್ತವ್ಯವನ್ನು ನಿರ್ವಹಿಸಬೇಕು ಎಂದು ಸೂಚಿಸಿದರು.

ಜನರ ಸಹಕಾರವಿಲ್ಲದೆ ಗಣತಿ ಕಾರ್ಯ ಯಶಸ್ವಿಯಾಗಲು ಸಾಧ್ಯವಿಲ್ಲ ಎಂಬುದನ್ನು ಉಲ್ಲೇಖಿಸಿದ ಅವರು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ ಸರಿಯಾದ ಮಾಹಿತಿಯನ್ನು ಸಂಗ್ರಹಿಸುವಲ್ಲಿ ಗಣತಿದಾರರು ಪ್ರಮುಖ ಪಾತ್ರವಹಿಸಬೇಕು ಎಂದು ತಿಳಿಸಿದರು. ಪ್ರತಿ ಮನೆಗೂ ಭೇಟಿ ನೀಡುವಾಗ ಸಹಾನುಭೂತಿಯೊಂದಿಗೆ ಗೌರವದಿಂದ ವರ್ತಿಸುವಂತೆ ಸಲಹೆ ನೀಡಿದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರು ಮಾತನಾಡಿ, ಜನಗಣತಿ ಪ್ರಕ್ರಿಯೆ ದೇಶದ ಅಭಿವೃದ್ಧಿಗೆ ದಿಕ್ಕು ತೋರಿಸುವ ಮಹತ್ವದ ಸಾಧನವಾಗಿದ್ದು, ಸಂಗ್ರಹವಾಗುವ ಪ್ರತಿಯೊಂದು ಮಾಹಿತಿ ಭವಿಷ್ಯದ ಯೋಜನೆಗಳಿಗೆ ಮಾರ್ಗಸೂಚಿಯಾಗುತ್ತದೆ ಎಂದು ಹೇಳಿದರು. ಯಾವುದೇ ಅಸಡ್ಡೆ ತೋರದೆ ನಿಖರ ಹಾಗೂ ಪೂರ್ಣ ಮಾಹಿತಿಯನ್ನು ಸಂಗ್ರಹಿಸುವಂತೆ ಸೂಚಿಸಿದರು.


ಗದಗ-ಬೆಟಗೇರಿ ನಗರಸಭೆಯ ಪೌರಾಯುಕ್ತ ರಾಜಾರಾಮ ಪವಾರ ಅವರು ಮಾತನಾಡಿ, ಜನಗಣತಿ ಕಾರ್ಯ ರಾಷ್ಟ್ರದ ಆರ್ಥಿಕ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದು ಹೇಳಿದರು. ಸರಿಯಾದ ಮಾಹಿತಿ ಆಧಾರದ ಮೇಲೆ ಸರ್ಕಾರ ಅಭಿವೃದ್ಧಿ ಯೋಜನೆಗಳನ್ನು ರೂಪಿಸುವುದರಿಂದ, ಪ್ರತಿಯೊಬ್ಬ ಗಣತಿದಾರರೂ ತಮ್ಮ ಜವಾಬ್ದಾರಿಯನ್ನು ಅರಿತು ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸಬೇಕು ಎಂದು ಕರೆ ನೀಡಿದರು.

ಈ ತರಬೇತಿ ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ತಹಸೀಲ್ದಾರ್ ಶ್ರೀನಿವಾಸ್ ಮೂರ್ತಿ ಕುಲಕರ್ಣಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ಪರಶುರಾಮ್ ಶೇರಖಾನೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಗಣತಿದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತರಬೇತಿಯ ಪ್ರಯೋಜನ ಪಡೆದರು.

ಒಟ್ಟಾರೆ, ಮೂರು ದಿನಗಳ ಈ ತರಬೇತಿ ಗಣತಿದಾರರಿಗೆ ಕಾರ್ಯನಿರ್ವಹಣೆಯ ಕುರಿತ ಸ್ಪಷ್ಟತೆ ನೀಡುವುದರ ಜೊತೆಗೆ, ಜನಗಣತಿ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಅಗತ್ಯವಾದ ಆತ್ಮವಿಶ್ವಾಸವನ್ನು ತುಂಬಿತು.

**600ರಲ್ಲಿ 598 ಅಂಕ – ಆಳ್ವಾಸ್ ಕಾಲೇಜಿನ ವಿದ್ಯಾರ್ಥಿನಿಯಿಂದ ಅದ್ಭುತ ಸಾಧನೆ**

# ಲಕ್ಷ್ಮೇಶ್ವರದ ರಕ್ಷಿತಾಗೆ ರಾಜ್ಯಕ್ಕೆ ದ್ವಿತೀಯ ರ್‍ಯಾಂಕ್



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮೂಡಬಿದರೆಯ ಆಳ್ವಾಸ್ ಪಿಯು ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಲಕ್ಷ್ಮೇಶ್ವರದ ವಿದ್ಯಾರ್ಥಿನಿ ರಕ್ಷಿತಾ ಎಂ. ಸಂಗನಪೇಟ ಅವರು ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ 600ಕ್ಕೆ 598 ಅಂಕಗಳನ್ನು ಪಡೆದು ರಾಜ್ಯಕ್ಕೆ ದ್ವಿತೀಯ ರ್‍ಯಾಂಕ್ ಗಳಿಸಿ ಪಟ್ಟಣದ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಪಟ್ಟಣದ ಪುರಸಭೆಯ ಉಮಾ ವಿದ್ಯಾಲಯ ಹೈಸ್ಕೂಲ್‌ನಲ್ಲಿ ಗಣಿತ ಶಿಕ್ಷಕರಾಗಿರುವ ಎಂ.ಬಿ. ಸಂಗನಪೇಟ ಅವರ ಪುತ್ರಿಯಾದ ರಕ್ಷಿತಾ, ಯೂನಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ. 99 ಅಂಕಗಳನ್ನು ಗಳಿಸಿ ಗಮನ ಸೆಳೆದಿದ್ದರು.

ಇದೀಗ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಇಂಗ್ಲಿಷ್ ವಿಷಯದಲ್ಲಿ 98 ಅಂಕಗಳನ್ನು ಪಡೆದಿದ್ದು, ಉಳಿದ ಎಲ್ಲಾ ವಿಷಯಗಳಲ್ಲಿ ಶೇ. 100 ಅಂಕಗಳನ್ನು ಗಳಿಸಿರುವುದು ವಿಶೇಷ ಸಾಧನೆ.

ವೈದ್ಯೆಯಾಗುವ ಕನಸು ಹೊಂದಿರುವ ರಕ್ಷಿತಾ, ಪರೀಕ್ಷೆ ಸಂದರ್ಭದಲ್ಲಿ ಆತಂಕ ಮತ್ತು ಭಯ ಇರಬಾರದು. ದಿನನಿತ್ಯದ ಅಭ್ಯಾಸದಲ್ಲಿ ಶ್ರದ್ಧೆ ಮತ್ತು ಏಕಾಗ್ರತೆ ಅಗತ್ಯ. ಅಂದಿನ ಪಾಠವನ್ನು ಅಂದೇ ಅಭ್ಯಾಸ ಮಾಡುವುದರಿಂದ ಉತ್ತಮ ಫಲಿತಾಂಶ ಸಾಧ್ಯ ಎಂದು ತನ್ನ ಅನುಭವ ಹಂಚಿಕೊಂಡಿದ್ದಾಳೆ.

ಉತ್ತಮ ವಾತಾವರಣ, ಉಪನ್ಯಾಸಕರ ಮಾರ್ಗದರ್ಶನ, ಪಾಲಕರು ಮತ್ತು ಸ್ನೇಹಿತರ ಪ್ರೋತ್ಸಾಹವೇ ಯಶಸ್ಸಿಗೆ ಕಾರಣ ಎಂದು ತಿಳಿಸಿದ ರಕ್ಷಿತಾಳಿಗೆ, ಮುಂದಿನ ವೈದ್ಯಕೀಯ ವಿದ್ಯಾಭ್ಯಾಸಕ್ಕೆ ಎಲ್ಲ ರೀತಿಯ ಸಹಕಾರ ನೀಡುವುದಾಗಿ ಪಾಲಕರು ತಿಳಿಸಿದ್ದಾರೆ.

**ಬಡತನದ ನಡುವೆ ಶಿಕ್ಷಣ ಹೋರಾಟ – ಸಿಇಟಿ, ನೀಟ್‌ಗೆ ಸಜ್ಜಾಗಿರುವ ದೊಡ್ಡೂರ ತಾಂಡಾದ ವಿದ್ಯಾರ್ಥಿ**

# ಕಲ್ಲಂಗಡಿ ಮಾರುತ್ತಲೇ ಕನಸು ಬೆನ್ನಟ್ಟಿದ ಅನಿಲ–ಪಿಯುಸಿಯಲ್ಲಿ 85% ಸಾಧನೆ



> "ಹಾಸ್ಟೇಲ್‌ನಲ್ಲಿ ಇದ್ದು ಸಾಧ್ಯವಾದಷ್ಟು ಕಷ್ಟಪಟ್ಟು ಓದಿ ಶೇ. 85 ರಷ್ಟು ಅಂಕ ಗಳಿಸಿದ್ದೇನೆ. ಆದರೆ ಈಗ ಸಾಕಷ್ಟು ಸ್ಪರ್ಧೆ ಇರುವುದರಿಂದ ನಾನು ಪಡೆದ ಅಂಕ ಕಡಿಮೆಯೇ ಅನಿಸುತ್ತದೆ. ಮನೆಯ ಬಡತನದಿಂದ ಕಲ್ಲಂಗಡಿ ಹಣ್ಣು ಮಾರುವ ಜೊತೆಗೆ ಸಿಇಟಿ ಮತ್ತು ನೀಟ್ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿದ್ದೇನೆ. ಉತ್ತಮ ಅಂಕ ಬಂದು ಅವಕಾಶ ಸಿಕ್ಕರೆ ಮೆಡಿಕಲ್ ಓದಲು ಇಷ್ಟ. ಇಲ್ಲವಾದರೆ ಪೊಲೀಸ್ ಇಲಾಖೆಗೆ ಸೇರಬೇಕೆಂಬ ಆಸೆ ಇದೆ. ಯಾವ ಸಂದರ್ಭದಲ್ಲೂ ಓದನ್ನು ಮುಂದುವರಿಸುತ್ತೇನೆ."
>
> **– ಅನಿಲ ಲಮಾಣಿ,** ಪಿಯುಸಿ ವಿದ್ಯಾರ್ಥಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಧಿಸುವ ಛಲವಿದ್ದರೆ ಯಾವುದೇ ಅಡ್ಡಿಯೂ ಸಾಧನೆಗೆ ಅಡ್ಡಿಯಾಗುವುದಿಲ್ಲ ಎಂಬುದಕ್ಕೆ ದೊಡ್ಡೂರ ತಾಂಡಾದ ಅನಿಲ ಲಮಾಣಿ ಜೀವಂತ ಉದಾಹರಣೆಯಾಗಿದ್ದಾನೆ. ಹಾದಿ ಬೀದಿಯಲ್ಲಿ ಕಲ್ಲಂಗಡಿ ಹಣ್ಣು ಮಾರುವ ತಂದೆ ಮತ್ತು ಕೂಲಿ ಕೆಲಸ ಮಾಡುವ ತಾಯಿಯ ಪುತ್ರನಾದ ಅನಿಲ, ಪಿಯುಸಿ ಪರೀಕ್ಷೆಯಲ್ಲಿ ಶೇ. 85 ರಷ್ಟು ಅಂಕ ಗಳಿಸಿ ಗಮನ ಸೆಳೆದಿದ್ದಾನೆ.

ಸಮೀಪದ ಮುಳಗುಂದದ ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ವಿಜ್ಞಾನ ವಿಭಾಗದಲ್ಲಿ ಪಿಯುಸಿ ಓದಿದ ಅನಿಲ ಉತ್ತಮ ಫಲಿತಾಂಶ ಪಡೆದಿದ್ದಾನೆ. ಆದರೆ ಮುಂದಿನ ಶೈಕ್ಷಣಿಕ ಭವಿಷ್ಯದ ಬಗ್ಗೆ ಆತಂಕ ಎದುರಾಗಿದೆ. ಪಿಯುಸಿ ನಂತರ ದೊಡ್ಡ ಕಾಲೇಜುಗಳಲ್ಲಿ ಲಕ್ಷಾಂತರ ರೂಪಾಯಿ ಶುಲ್ಕ ಕಟ್ಟಲು ಕುಟುಂಬದ ಆರ್ಥಿಕ ಸ್ಥಿತಿ ಅನುಕೂಲಕರವಾಗಿಲ್ಲ.

ಇದರಿಂದಾಗಿ ಪರೀಕ್ಷೆ ಮುಗಿದ ತಕ್ಷಣವೇ ಲಕ್ಷ್ಮೇಶ್ವರ ಪಟ್ಟಣದಲ್ಲಿ ಕಲ್ಲಂಗಡಿ ಹಣ್ಣು ಮಾರಾಟ ಮಾಡುವ ಕೆಲಸದಲ್ಲಿ ಅನಿಲ ತೊಡಗಿಕೊಂಡಿದ್ದಾನೆ. ಮನೆಯ ಆರ್ಥಿಕ ಪರಿಸ್ಥಿತಿ ಹಿನ್ನಲೆಯಲ್ಲಿ ಶಾಲಾ ರಜೆ ದಿನಗಳಲ್ಲಿ ಕೂಡ ತಂದೆ–ತಾಯಿಯರ ಜೊತೆ ಕೆಲಸ ಮಾಡುತ್ತಿದ್ದ ಅನಿಲ, ಇದೀಗ ಬಿಸಿಲಿನ ಬೇಗೆಯಲ್ಲೂ ದುಡಿಯುತ್ತಲೇ ತನ್ನ ವಿದ್ಯಾಭ್ಯಾಸದ ಕನಸನ್ನು ಬೆನ್ನಟ್ಟುತ್ತಿದ್ದಾನೆ.

ಅನಿಲನ ತಮ್ಮ 10ನೇ ತರಗತಿಯಲ್ಲಿ ಓದುತ್ತಿದ್ದು, ತಂಗಿ ಅಂಕವಿಕಲೆಯಾಗಿದ್ದಾಳೆ. ಬಡತನದ ನಡುವೆಯೂ ಮಗನನ್ನು ಓದಿಸಲು ಶಕ್ತಿಮೀರಿದ ಪ್ರಯತ್ನ ಮಾಡುತ್ತೇವೆ ಎಂಬುದು ತಂದೆ ಮಲ್ಲೇಶಪ್ಪ ಮತ್ತು ತಾಯಿಯ ಆಶಯವಾಗಿದೆ.

**1010ರಲ್ಲಿ 997 ವಿದ್ಯಾರ್ಥಿಗಳು ಉತ್ತೀರ್ಣ – ಮೂರು ವಿಭಾಗಗಳಲ್ಲಿ ಮಿಂಚಿದ ಸಾಧನೆ**

# ಅನ್ನದಾನೇಶ್ವರ ಪಿಯು ಕಾಲೇಜಿಗೆ 98.71% ಅದ್ಭುತ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ಫಲಿತಾಂಶ ಶೇ. 98.71 ರಷ್ಟಾಗಿದ್ದು, ಕಾಲೇಜು ಉತ್ತಮ ಸಾಧನೆ ತೋರಿದೆ ಎಂದು ಪ್ರಾಚಾರ್ಯ ವೈ.ಸಿ. ಪಾಟೀಲ ತಿಳಿಸಿದ್ದಾರೆ. ಕಲಾ, ವಿಜ್ಞಾನ ಹಾಗೂ ವಾಣಿಜ್ಯ ವಿಭಾಗಗಳಿಂದ ಒಟ್ಟು 1010 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಅವರಲ್ಲಿ 997 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಕನ್ನಡ, ಹಿಂದಿ, ಇತಿಹಾಸ, ಭೂಗೋಳಶಾಸ್ತ್ರ, ವ್ಯವಹಾರ ಅಧ್ಯಯನ, ಸಮಾಜಶಾಸ್ತ್ರ, ರಾಜ್ಯಶಾಸ್ತ್ರ, ಜೀವಶಾಸ್ತ್ರ, ಲೆಕ್ಕಶಾಸ್ತ್ರ, ಗಣಕ ವಿಜ್ಞಾನ ಹಾಗೂ ಶಿಕ್ಷಣಶಾಸ್ತ್ರ ವಿಷಯಗಳಲ್ಲಿ ನೂರಕ್ಕೆ ನೂರು ಫಲಿತಾಂಶ ಸಾಧಿಸಲಾಗಿದೆ.

ಕಲಾ ವಿಭಾಗದಲ್ಲಿ ಹುಲಿಗೆಮ್ಮ (589/600, 98.16%), ವಾಣಿಜ್ಯ ವಿಭಾಗದಲ್ಲಿ ಸಹನಾ (580/600, 96.66%) ಹಾಗೂ ವಿಜ್ಞಾನ ವಿಭಾಗದಲ್ಲಿ ಜ್ಯೋತಿ (583/600, 97.16%) ವಿಭಾಗಾವಾರು ಪ್ರಥಮ ಸ್ಥಾನ ಪಡೆದಿದ್ದಾರೆ. ಒಟ್ಟು 361 ವಿದ್ಯಾರ್ಥಿಗಳು ಪ್ರಶಸ್ತಿ ಸಹಿತ ಪ್ರಥಮ ವರ್ಗ, 567 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ, 67 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿ ಹಾಗೂ 9 ವಿದ್ಯಾರ್ಥಿಗಳು ಪಾಸ್ ವರ್ಗದಲ್ಲಿ ಉತ್ತೀರ್ಣರಾಗಿದ್ದಾರೆ. ವಿಭಾಗವಾರು ಫಲಿತಾಂಶದಲ್ಲಿ ಕಲಾ ವಿಭಾಗದಲ್ಲಿ 273ರಲ್ಲಿ 264 ವಿದ್ಯಾರ್ಥಿಗಳು (96.07%), ವಾಣಿಜ್ಯ ವಿಭಾಗದಲ್ಲಿ 213ರಲ್ಲಿ 212 ವಿದ್ಯಾರ್ಥಿಗಳು (99.53%) ಮತ್ತು ವಿಜ್ಞಾನ ವಿಭಾಗದಲ್ಲಿ 524ರಲ್ಲಿ 521 ವಿದ್ಯಾರ್ಥಿಗಳು (99.43%) ಪಾಸಾಗಿದ್ದಾರೆ. ಕಲಾ ವಿಭಾಗದಲ್ಲಿ ಭೀಮವ್ವ ಜೋಗಿನ್ (96.33%), ವಂದನಾ ತೊಂಡಿಹಾಳ (95.66%), ವಾಣಿಜ್ಯ ವಿಭಾಗದಲ್ಲಿ ಪ್ರಶಾಂತ ಮತ್ತು ಮಂಜುನಾಥ ತಾಳಿಕೋಟಿ (96.16%), ಶ್ರೇಯಾ ಕನಾಜ (95.83%), ವಿಜ್ಞಾನ ವಿಭಾಗದಲ್ಲಿ ಐಶ್ವರ್ಯ ಗೋಸಗೊಂಡ (97%) ಹಾಗೂ ವೀರೇಶ ಅಂಗಡಿ (96.5%) ಉತ್ತಮ ಸಾಧನೆ ತೋರಿದ್ದಾರೆ.

ಉತ್ತಮ ಫಲಿತಾಂಶ ತಂದುಕೊಟ್ಟ ವಿದ್ಯಾರ್ಥಿಗಳು ಹಾಗೂ ಶ್ರಮಿಸಿದ ಪ್ರಾಧ್ಯಾಪಕ ವೃಂದಕ್ಕೆ ಸಂಸ್ಥೆಯ ಅಧ್ಯಕ್ಷ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಮತ್ತು ಆಡಳಿತ ಮಂಡಳಿ ಅಭಿನಂದನೆ ಸಲ್ಲಿಸಿದ್ದಾರೆ ಎಂದು ಪ್ರಾಚಾರ್ಯರು ತಿಳಿಸಿದ್ದಾರೆ.

**80ನೇ ಜನ್ಮದಿನ, 50ನೇ ವಿವಾಹ ವಾರ್ಷಿಕೋತ್ಸವ ಸಂಭ್ರಮ – "ಸಂಭ್ರಮ: ಸಾವಿರದ ಹೆಜ್ಜೆಗಳು" ಅನಾವರಣ**

# ಬಾವಿ ಬೆಟ್ಟಪ್ಪನವರ ಅಭಿನಂದನ ಗ್ರಂಥ ಲೋಕಾರ್ಪಣೆ ಇಂದು

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ


ಪಟ್ಟಣದ ಪಂಚಮಸಾಲಿ ಭವನದಲ್ಲಿ ಎಪ್ರಿಲ್ 12ರ ಭಾನುವಾರ ಬೆಳಿಗ್ಗೆ 10 ಗಂಟೆಗೆ ಶ್ರೀ ಬಾವಿ ಬೆಟ್ಟಪ್ಪನವರ 80ನೇ ವರ್ಷದ ಜನ್ಮದಿನೋತ್ಸವ, 50ನೇ ವರ್ಷದ ವಿವಾಹ ವಾರ್ಷಿಕೋತ್ಸವ ಹಾಗೂ "ಸಂಭ್ರಮ: ಸಾವಿರದ ಹೆಜ್ಜೆಗಳು" ಅಭಿನಂದನ ಗ್ರಂಥದ ಲೋಕಾರ್ಪಣಾ ಸಮಾರಂಭವು ವಿಜೃಂಭಣೆಯಿಂದ ನಡೆಯಲಿದೆ.

ಸುತ್ತೂರು ಶ್ರೀಕ್ಷೇತ್ರದ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ಗದಗಿನ ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ಹಾಗೂ ಕೊಪ್ಪಳದ ಗವಿಮಠದ ಶ್ರೀ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಕಾರ್ಯಕ್ರಮಕ್ಕೆ ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಕಾರ್ಯಕ್ರಮವನ್ನು ಮಾಜಿ ಸಚಿವ ಹೆಚ್. ಏಕಾಂತಯ್ಯ ಉದ್ಘಾಟಿಸಲಿದ್ದು, ಬಾವಿ ಕುಟುಂಬದ ಹಿರಿಯರಾದ ಶ್ರೀಮತಿ ಕಂಚಿಕೇರಿ ಸುಶೀಲಮ್ಮ ಕೊಟ್ರಬಸಪ್ಪ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅವರು ಅಭಿನಂದನ ಗ್ರಂಥವನ್ನು ಲೋಕಾರ್ಪಣೆ ಮಾಡಲಿದ್ದು, ಸಚಿವ ಶಿವಾನಂದ ಪಾಟೀಲ ದೃಶ್ಯ ಚಿತ್ರಾವಳಿಗಳನ್ನು ಅನಾವರಣಗೊಳಿಸಲಿದ್ದಾರೆ.

ಮಾಜಿ ಸಚಿವ ಡಾ. ಮುರುಗೇಶ್ ಆರ್. ನಿರಾಣಿ ಆಶಯ ನುಡಿಗಳನ್ನಾಡಲಿದ್ದು, ಡಾ. ಬಸವರಾಜ ದಿಂಡೂರ ಅವರು ಬಾವಿ ಬೆಟ್ಟಪ್ಪನವರ ಬದುಕಿನ ಪಯಣದ ಮೆಲುಕು ಹಾಕಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಬಸವರಾಜ ರಾಯರೆಡ್ಡಿ, ಸಿ. ನಾರಾಯಣಸ್ವಾಮಿ, ಸಂಸದ ಈ. ತುಕರಾಂ, ಶಾಸಕರಾದ ನೇಮಿರಾಜ ನಾಯಕ, ಮಲ್ಲಿಕಾರ್ಜುನ, ಕೃಷ್ಣ ನಾಯಕ ಸೇರಿದಂತೆ ಹಲವು ಜನಪ್ರತಿನಿಧಿಗಳು ಹಾಗೂ ಗಣ್ಯರು ಭಾಗವಹಿಸಲಿದ್ದಾರೆ.

ಇಟಗಿ ಕಲ್ಲೇಶಪ್ಪ ಹಾಗೂ ಚೋರನೂರು ಕೊಟ್ರಪ್ಪ ಅವರ ಸಂಪಾದಕತ್ವದಲ್ಲಿ ಈ ಅಭಿನಂದನ ಗ್ರಂಥ ಹೊರ ಬಂದಿದ್ದು, "ಸಂಭ್ರಮ ಅಭಿಮಾನಿ ಬಳಗ" ವತಿಯಿಂದ ಕಾರ್ಯಕ್ರಮ ಆಯೋಜಿಸಲಾಗಿದೆ.



# ಮೊರಾರ್ಜಿ ದೇಸಾಯಿ ಕಾಲೇಜಿಗೆ ಅತ್ಯುತ್ತಮ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಮುರಾರ್ಜಿ ದೇಸಾಯಿ ವಸತಿ ಶಾಲೆಯ ಪದವಿ ಪೂರ್ವ ಮಹಾವಿದ್ಯಾಲಯದ 2025–26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ತೋರಿದ್ದಾರೆ.

ಅಕ್ಷತಾ ರಿತ್ತಿ 578 ಅಂಕಗಳು (96.33%) ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ. ಸರಸ್ವತಿ ಲಮಾಣಿ 567 ಅಂಕಗಳು (94.50%) ಪಡೆದು ದ್ವಿತೀಯ ಸ್ಥಾನ ಪಡೆದರೆ, ಅಶ್ವಿನಿ ರಾಠೋಡ 565 ಅಂಕಗಳು (94.16%) ಪಡೆದು ತೃತೀಯ ಸ್ಥಾನ ಗಳಿಸಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಉಪನ್ಯಾಸಕರು ಅಭಿನಂದನೆ ಸಲ್ಲಿಸಿದ್ದಾರೆ.

# ಚಿಂಚಲಿ ಪಿಯು ಕಾಲೇಜಿಗೆ ಉತ್ತಮ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಸಮೀಪದ ಚಿಂಚಲಿ ಸರಕಾರಿ ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯದ 2025–26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ತೋರಿದ್ದಾರೆ.

ಗಂಗವ್ವ ಬಳ್ಳಾರಿ ಮತ್ತು ನಿವೇದಿತಾ ಗದಗ ಅವರು ತಲಾ 560 ಅಂಕಗಳು (93.33%) ಪಡೆದು ಸಂಯುಕ್ತ ಪ್ರಥಮ ಸ್ಥಾನ ಪಡೆದಿದ್ದಾರೆ. ರೇಣುಕಾ ಜಂಗಳಿ 514 ಅಂಕಗಳು (85.66%) ಪಡೆದು ದ್ವಿತೀಯ ಸ್ಥಾನ ಪಡೆದರೆ, ನಗೀನಾ ದರಗಾದ 500 ಅಂಕಗಳು (83.33%) ಪಡೆದು ತೃತೀಯ ಸ್ಥಾನ ಗಳಿಸಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಉಪನ್ಯಾಸಕರು ಅಭಿನಂದನೆ ಸಲ್ಲಿಸಿದ್ದಾರೆ.

# ಏ.14ರಂದು ಅಂಬೇಡ್ಕರ್- ಬಾಬು ಜಗಜೀವನ ರಾಮ್ ಜಯಂತಿ

▶▶ಮೊದಲನೇ ಪುಟದಿಂದ


ಮಾರ್ಗವಾಗಿ ಮಧ್ಯಾಹ್ನ 12 ಗಂಟೆಗೆ ಡಾ. ಬಿ.ಆರ್. ಅಂಬೇಡ್ಕರ್ ಭವನವನ್ನು ತಲುಪಲಿದೆ.

ನಂತರ ಅಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ವಿವಿಧ ಗಣ್ಯರು ಭಾಗವಹಿಸಲಿದ್ದಾರೆ.

ಈ ಮೆರವಣಿಗೆ ಹಾಗೂ ಕಾರ್ಯಕ್ರಮದಲ್ಲಿ ಜನಪ್ರತಿನಿಧಿಗಳು, ಜಿಲ್ಲಾ ಮಟ್ಟ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತ ಸಮುದಾಯಗಳ ಮುಖಂಡರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಅವರು ಮನವಿ ಮಾಡಿದ್ದಾರೆ.

# ನಿಧನ

## ಜಯಶ್ರೀ ಹೊಂಬಾಳಿ



**ಗದಗ:** ನಾಡಿನ ಹಿರಿಯ ನಿಸರ್ಗ ಚಿಕಿತ್ಸಕರಾದ ಡಾ. ಸತೀಶ ಹೊಂಬಾಳಿ ಅವರ ಮಾತೋಶ್ರೀ ಶ್ರೀಮತಿ ಜಯಶ್ರೀ ಎಂ. ಹೊಂಬಾಳಿ (88) ಅವರು ಎಪ್ರಿಲ್ 11ರಂದು ವೃದ್ಧಾಪ್ಯದಿಂದ ನಿಧನರಾದರು.

ದಿವಂಗತರಿಗೆ ಡಾ. ಸತೀಶ ಹೊಂಬಾಳಿ ಸೇರಿದಂತೆ ಇಬ್ಬರು ಪುತ್ರರು ಹಾಗೂ ಇಬ್ಬರು ಪುತ್ರಿಯರು ಇದ್ದಾರೆ. ಅವರ ಅಂತ್ಯಕ್ರಿಯೆ ಎಪ್ರಿಲ್ 12ರಂದು ಮುಂಜಾನೆ 7 ಗಂಟೆಗೆ ಸಿದ್ದಲಿಂಗ ನಗರದ ಮೊದಲನೇ ಅಡ್ಡರಸ್ತೆಯಲ್ಲಿರುವ ಸ್ವಗೃಹದಿಂದ ಹೊರಡಲಿದೆ.

ಜಯಶ್ರೀ ಹೊಂಬಾಳಿ ಅವರ ನಿಧನಕ್ಕೆ ಕಾನೂನು ಸಚಿವ ಡಾ. ಎಚ್.ಕೆ. ಪಾಟೀಲ, ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಹಾಗೂ ಮಾಜಿ ಶಾಸಕ ಡಿ.ಆರ್. ಪಾಟೀಲ, ಪಂ. ರಾಜಗೋಪಾಲಾಚಾರ್ಯ ಮಳಗಿ, ವೀರನಾರಾಯಣ ತ್ರಿಕೂಟೇಶ್ವರ ದೇವಾಲಯದ ಧರ್ಮದರ್ಶಿ ಮಂಡಳಿ ಅಧ್ಯಕ್ಷ ಡಾ. ಕುಶಾಲ ಗೋಡಖಿಂಡಿ, ಕಾರ್ಯದರ್ಶಿ ಆನಂದ ಪೊತ್ನೀಸ್, ಧರ್ಮದರ್ಶಿಗಳಾದ ಗುರುರಾಜ ಬಳಗಾನೂರ, ಡಿ.ಕೆ. ದೇಶಪಾಂಡೆ, ಜಯದೇವ ಭಟ್ಟ, ಸೂರ್ಯನಾರಾಯಣ ನರಗುಂದಕರ, ಸಿದ್ದಲಿಂಗಪ್ಪ ಮಾನ್ವಿ, ಯೋಗೇಶ ಸಾವಕಾರ, ಜಿಲ್ಲಾ ಬ್ರಾಹ್ಮಣ ಸಮಾಜದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ, ಶ್ರೀನಿವಾಸ ಹುಯಿಲಗೋಳ ಸೇರಿದಂತೆ ಅನೇಕ ಗಣ್ಯರು ತೀವ್ರ ಸಂತಾಪ ಸೂಚಿಸಿದ್ದಾರೆ.

**78ನೇ ಜನ್ಮದಿನದ ಅಂಗವಾಗಿ ಶಾಲಾ ಮಕ್ಕಳಿಗೆ ನೋಟ್‌ಬುಕ್, ಪೆನ್ ವಿತರಣೆ**

# ಜನಸ್ನೇಹಿ ಆಡಳಿತದಿಂದ ಜನಮನ ಗೆದ್ದ ಜಿ.ಎಸ್. ಪಾಟೀಲ



■ವಿಜಯಸಾಕ್ಷಿ ಸುದ್ದಿ, ಡಂಬಳ

ನೀರಾವರಿ, ತೋಟಗಾರಿಕಾ ಕಾಲೇಜು ಅಭಿವೃದ್ಧಿ ಸೇರಿದಂತೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಸದಾ ಚಿಂತನೆ ನಡೆಸಿ, ಜನಸಾಮಾನ್ಯರೊಂದಿಗೆ ಬೆರೆತು ಜನಸ್ನೇಹಿ ಆಡಳಿತ ನೀಡುತ್ತಿರುವ ರೋಣ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಅವರು ಅಪರೂಪದ ರಾಜಕಾರಣಿಯಾಗಿ ಜನಮನ ಗೆದ್ದಿದ್ದಾರೆ ಎಂದು ಕಾಂಗ್ರೆಸ್ ಪಕ್ಷದ ಯುವ ನೇತಾರ ಬಸವರಡ್ಡಿ ಬಂಡಿಹಾಳ ಹೇಳಿದರು.

ಶುಕ್ರವಾರ ಡಂಬಳ ಗ್ರಾಮದ ಹೊಸಡಂಬಳದ ಸರಕಾರಿ ಪ್ರಾಥಮಿಕ ಶಾಲೆ ಹಾಗೂ ಸರಕಾರಿ ಉರ್ದು ಶಾಲೆಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಶಾಸಕರ 78ನೇ ಜನ್ಮದಿನದ ಅಂಗವಾಗಿ ನೋಟ್‌ಬುಕ್ ಮತ್ತು ಪೆನ್ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಶಾಸಕರ ಸಾರ್ಥಕ ಬದುಕಿನ ಪ್ರತಿಬಿಂಬವೇ ಅವರ 78ನೇ ಜನ್ಮದಿನವಾಗಿದ್ದು, ಸದಾ ಜನಪರವಾಗಿ ಕೆಲಸ ಮಾಡುವ ಜನನಾಯಕನಾಗಿ ಹೆಸರುವಾಸಿಯಾಗಿದ್ದಾರೆ. ಅವರ ಜನ್ಮದಿನದ ಅಂಗವಾಗಿ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ ಮಾಡಿರುವುದು ಅರ್ಥಪೂರ್ಣ ಕಾರ್ಯವೆಂದು ಹೇಳಿದರು.

ತಾಲೂಕು ಎಸ್‌ಸಿ ಘಟಕದ ಅಧ್ಯಕ್ಷ ಮರಿಯಪ್ಪ ಸಿದ್ಧಣ್ಣವರ ಮಾತನಾಡಿ, ಜಿ.ಎಸ್. ಪಾಟೀಲ ಅವರು ಸಾವಿರ ಕೆರೆಗಳ ಸರದಾರರಾಗಿದ್ದು, ಬಡವರು, ದೀನದಲಿತರು ಹಾಗೂ ಶೋಷಿತರ ಪರವಾಗಿ ಸದಾ ಚಿಂತನೆ ನಡೆಸಿ ಕ್ಷೇತ್ರದ ಅಭಿವೃದ್ಧಿಗೆ ಆದ್ಯತೆ ನೀಡುತ್ತಿದ್ದಾರೆ ಎಂದರು. ಹಿರಿಯ ನೇತಾರ ಸಣ್ಣಹನಮಪ್ಪ ಬಂಡಿ ಕೂಡ ಮಾತನಾಡಿದರು.

ಹಿರಿಯ ಮುಖಂಡರಾದ ಮಹೇಶ ಗಡಗಿ ಮತ್ತು ಬುಡ್ನೆಸಾಬ ಅತ್ತಾರ ಮಾತನಾಡಿ, ಶಾಸಕರು ತಮ್ಮ ಆಡಳಿತಾವಧಿಯಲ್ಲಿ ಶಾಶ್ವತ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದಾರೆ. ಬರಪೀಡಿತ ಪ್ರದೇಶದ ಜನರ ಸಂಕಷ್ಟ ಅರಿತು ಕೆರೆಗಳನ್ನು ತುಂಬಿಸಿ ರೈತರ ಬದುಕಿಗೆ ಆಶಾಕಿರಣವಾಗಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸೋಮಣ್ಣ ಗುಡ್ಡದ, ಶರಣು ಬಂಡಿಹಾಳ, ಎಸ್‌ಡಿಎಂಸಿ ಅಧ್ಯಕ್ಷ ಮಾರುತಿ ಎಮ್ಮಿ, ಯಂಕಣ್ಣ ಗಡಗಿ, ಬಾಬು ಮೂಲಿಮನಿ, ಬಸವರಾಜ ಶಿರೋಳ, ಮಂಜುನಾಥ ಸಂಜೀವಣ್ಣವರ, ಮರಿಯಪ್ಪ ಹಳ್ಳಾಕಾರ, ಭೀಮಪ್ಪ ಗದಗಿನ, ದೇವಪ್ಪ ಗುಡ್ಡದ, ಬಾಬು ಸರಕಾವಾಸ, ಸುರೇಶ್ ಗಡಗಿ, ಮಾಬುಸಾಬ ಬೆಟಗೇರಿ, ಮಲ್ಲಿಕಾರ್ಜುನ ಪ್ಯಾಟಿ, ಫಕೀರಪ್ಪ ಆದಮ್ಮನವರ, ಅಲ್ಲಾವುದ್ದಿನ್ ಹೊಂಬಳ, ಹನಮಂತಪ್ಪ ಗದಗಿನ ಸೇರಿದಂತೆ ಹಲವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka